ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: 04 | ಸಂಚಿಕೆ: 108 Issue: 108 | ರಾಯಚೂರು Raichur | 10-10-2026 | ಶನಿವಾರ Saturday | ಪುಟ: 04 Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com


ಸಂಪಾದಕರು : ಗುರುರಾಜ ಕೆ
Editor: Gururaja K 98863 85685







# ಮತ ಕಳ್ಳತನ ಆರೋಪ: ರಾಷ್ಟ್ರಪತಿಗೆ ಜ್ಞಾಪಕ ಪತ್ರ ಸಲ್ಲಿಸಿದ ಇಂಡಿಯಾ ಮೈತ್ರಿಕೂಟ

ನವದೆಹಲಿ: ಚುನಾವಣಾ ಪ್ರಕ್ರಿಯೆ ಹಾಗೂ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಮತ ಕಳ್ಳತನ ನಡೆದಿದೆ ಎಂದು ಆರೋಪಿಸಿರುವ ಇಂಡಿಯಾ ಮೈತ್ರಿಕೂಟದ ನಾಯಕರು ಶುಕ್ರವಾರ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ಜ್ಞಾಪಕ ಪತ್ರ ಸಲ್ಲಿಸಿದರು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಚುನಾವಣಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಖಚಿತಪಡಿಸಬೇಕು ಎಂದು ನಿಯೋಗ ಒತ್ತಾಯಿಸಿತು.

ರಾಷ್ಟ್ರಪತಿಯನ್ನು ಭೇಟಿ ಮಾಡಿದ ನಿಯೋಗದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಸೇರಿದಂತೆ ಇಂಡಿಯಾ ಮೈತ್ರಿಕೂಟದ ವಿವಿಧ ಪಕ್ಷಗಳ ನಾಯಕರು ಭಾಗವಹಿಸಿದ್ದರು.

ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ರಾಹುಲ್ ಗಾಂಧಿ, ಚುನಾವಣಾ ಅಕ್ರಮಗಳ ಕುರಿತು ತಮ್ಮ ಆರೋಪಗಳನ್ನು ರಾಷ್ಟ್ರಪತಿಗಳ ಮುಂದೆ ವಿವರಿಸಲಾಗಿದೆ ಎಂದು ಹೇಳಿದರು. ರಾಷ್ಟ್ರಪತಿಗಳು ಆರೋಪಗಳಿಗೆ ಸಂಬಂಧಿಸಿದ ಸಾಕ್ಷ್ಯಗಳನ್ನು ಸಲ್ಲಿಸುವಂತೆ ಕೇಳಿದ್ದಾರೆ ಎಂದು ಅವರು ತಿಳಿಸಿದರು. ತಮ್ಮ ಬಳಿ ಇರುವ ದಾಖಲೆಗಳು ಹಾಗೂ ಮಾಹಿತಿಯನ್ನು ಸಂಗ್ರಹಿಸಿ ರಾಷ್ಟ್ರಪತಿಗಳಿಗೆ ಸಲ್ಲಿಸಲು ಸಿದ್ಧರಾಗಿರುವುದಾಗಿ ಹೇಳಿದರು.

ರಾಷ್ಟ್ರಪತಿಗಳು ತಮ್ಮ ಆರೋಪಗಳನ್ನು ತಿರಸ್ಕರಿಸಲಿಲ್ಲ ಎಂಬುದು ರಾಹುಲ್ ಗಾಂಧಿಯವರ ಅಭಿಪ್ರಾಯವಾಗಿದ್ದು, ಇದನ್ನು ಅವರು ಸಭೆಯ ಬಳಿಕ ಮಾಧ್ಯಮಗಳ ಮುಂದೆ ವ್ಯಕ್ತಪಡಿಸಿದರು. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧವೂ ಅವರು ಗಂಭೀರ ಆರೋಪಗಳನ್ನು ಮಾಡಿದರು. ಇವು ವಿರೋಧ ಪಕ್ಷದ ನಾಯಕರ ಆರೋಪಗಳಾಗಿದ್ದು, ಸ್ವತಂತ್ರವಾಗಿ ದೃಢಪಟ್ಟ ಸಂಗತಿಗಳೆಂದು ಪರಿಗಣಿಸಲಾಗುವುದಿಲ್ಲ.



ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಕಳೆದ ಕೆಲವು ದಿನಗಳಿಂದ ನಡೆಯುತ್ತಿರುವ ಪ್ರತಿಭಟನೆ ಹಾಗೂ ಮತದಾರರ ಹಕ್ಕುಗಳಿಗೆ ಸಂಬಂಧಿಸಿದ ತಮ್ಮ ಆಕ್ಷೇಪಗಳನ್ನು ರಾಷ್ಟ್ರಪತಿಗಳ ಗಮನಕ್ಕೆ ತರಲಾಗಿದೆ ಎಂದರು. ಚುನಾವಣೆಯಲ್ಲಿ ಇವಿಎಂ ಬದಲಿಗೆ ಮತಪತ್ರಗಳನ್ನು ಬಳಸುವ ಬೇಡಿಕೆಯನ್ನೂ ಜ್ಞಾಪಕ ಪತ್ರದಲ್ಲಿ ಮುಂದಿಡಲಾಗಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಹಾಗೂ ಚುನಾವಣಾ ಆಯೋಗದ ಕಾರ್ಯವೈಖರಿಯನ್ನು ಪ್ರಶ್ನಿಸಿ ಇಂಡಿಯಾ ಮೈತ್ರಿಕೂಟ ಕಳೆದ ಕೆಲವು ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದು, ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ ಆಗ್ರಹಿಸುತ್ತಿದೆ. ಶುಕ್ರವಾರ ರಾಷ್ಟ್ರಪತಿಗೆ ಜ್ಞಾಪಕ ಪತ್ರ ಸಲ್ಲಿಸುವ ಮೂಲಕ ಪ್ರತಿಭಟನೆಯ ಮುಂದಿನ ಹಂತವನ್ನು ದಾಖಲಿಸಿದೆ.

## ಸ್ನೇಹಿತನ ತಲೆ ಮೇಲೆ ಕಲ್ಲು ಎತ್ತಿಹಾಕಿ ಬರ್ಬರ ಹತ್ಯೆ




ಮಾನ್ವಿ: ಸ್ನೇಹಿತರಿಬ್ಬರ ನಡುವೆ ನಡೆದ ಘಟನೆ ಕೊಲೆಯಲ್ಲಿ ಅಂತ್ಯಗೊಂಡಿದ್ದು, ಸ್ನೇಹಿತನ ತಲೆಯ ಮೇಲೆ ಕಲ್ಲು ಎತ್ತಿಹಾಕಿ ಹತ್ಯೆ ಮಾಡಿರುವ ಘಟನೆ ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದ ಇಂದಿರಾನಗರದಲ್ಲಿ ನಡೆದಿದೆ.

ಪಟ್ಟಣದ ನಿವಾಸಿ ವಸೀಂ (38) ಕೊಲೆಯಾದ ವ್ಯಕ್ತಿಯಾಗಿದ್ದು, ಆತನ ಸ್ನೇಹಿತ ಜುಬೇರ್ ಕೊಲೆ ಆರೋಪಿಯಾಗಿದ್ದಾನೆ. ಘಟನೆಯ ಬಳಿಕ ಆರೋಪಿ ಜುಬೇರ್ ಪೊಲೀಸರಿಗೆ ಶರಣಾಗಿದ್ದಾನೆ ಎಂದು ತಿಳಿದುಬಂದಿದೆ.

ಮೃತ ವಸೀಂ ಹಾಗೂ ಆರೋಪಿ ಜುಬೇರ್ ಪರಸ್ಪರ ಸ್ನೇಹಿತರಾಗಿದ್ದು, ಇಬ್ಬರೂ ಗಾಂಜಾ ಸೇವನೆಯ ಚಟ ಹೊಂದಿದ್ದರು ಎನ್ನಲಾಗಿದೆ. ಇವರಿಬ್ಬರ ನಡುವೆ ಯಾವ ಕಾರಣಕ್ಕೆ ಜಗಳ ಉಂಟಾಯಿತು ಹಾಗೂ ಕೊಲೆಗೆ ನಿಖರ ಕಾರಣವೇನು ಎಂಬುದು ಪೊಲೀಸ್ ತನಿಖೆಯಿಂದ ತಿಳಿದುಬರಬೇಕಿದೆ.

2ನೇ ಪುಟಕ್ಕೆ

# ಎಸ್ಐಆರ್ ಪ್ರಕ್ರಿಯೆ ರದ್ದತಿಗೆ ಆಗ್ರಹಿಸಿ ಕಾಂಗ್ರೆಸ್ ಬೃಹತ್ ಪ್ರತಿಭಟನೆ




ರಾಯಚೂರು, ಅ.9: ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯನ್ನು ತಕ್ಷಣವೇ ರದ್ದುಪಡಿಸಬೇಕು ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಸಮಾನ ಮನಸ್ಕ ಸಂಘಟನೆಗಳ ನೇತೃತ್ವದಲ್ಲಿ ಶುಕ್ರವಾರ ನಗರದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ನಗರದ ನೇತಾಜಿ ನಗರ ವೃತ್ತದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದವರೆಗೆ ಸಾಗಿತು. ಮೆರವಣಿಗೆಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು, ವಿವಿಧ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು, ಪ್ರಗತಿಪರ ಸಂಘಟನೆಗಳ ಪ್ರತಿನಿಧಿಗಳು ಹಾಗೂ ಸಮಾನ ಮನಸ್ಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ, ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ರಕ್ಷಿಸುವ ಉದ್ದೇಶದಿಂದ ಈ ಹೋರಾಟ ಹಮ್ಮಿಕೊಳ್ಳಲಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆಯ ಹೆಸರಿನಲ್ಲಿ ಜನಸಾಮಾನ್ಯರ ಮತದಾನದ ಹಕ್ಕಿಗೆ ಧಕ್ಕೆ ತರುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರವು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಮತದಾನದ ಹಕ್ಕು ಅತ್ಯಂತ ಮಹತ್ವದ್ದಾಗಿದೆ. ಆದರೆ ಎಸ್ ಐಆರ್ ಪ್ರಕ್ರಿಯೆಯ ಮೂಲಕ ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡುವ ಆತಂಕ ಎದುರಾಗಿದೆ. ವಿಶೇಷವಾಗಿ ಬಡವರು, ಕಾರ್ಮಿಕರು, ಹಿಂದುಳಿದ ವರ್ಗಗಳು ಹಾಗೂ ಗ್ರಾಮೀಣ ಪ್ರದೇಶದ ಜನರು ಈ ಪ್ರಕ್ರಿಯೆಯಿಂದ ತೊಂದರೆ ಅನುಭವಿಸುವ ಸಾಧ್ಯತೆಯಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಚುನಾವಣಾ ಆಯೋಗವು ಯಾವುದೇ ರಾಜಕೀಯ ಪಕ್ಷದ ಪ್ರಭಾವಕ್ಕೆ ಒಳಗಾಗದೆ ಸ್ವತಂತ್ರವಾಗಿ ಹಾಗೂ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು. ಆದರೆ ಪ್ರಸ್ತುತ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಪ್ರಭಾವಕ್ಕೆ ಒಳಗಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬ ಅನುಮಾನ ಮೂಡಿದೆ ಎಂದು ಆರೋಪಿಸಿದ ಅವರು, ಜ್ಞಾನೇಶ್ ಕುಮಾರ್ ಅವರು ನೈತಿಕ ಹೊಣೆ ಹೊತ್ತು ತಕ್ಷಣ ರಾಜೀನಾಮೆ ನೀಡಬೇಕು. ಇಲ್ಲವಾದಲ್ಲಿ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರಜಾಪ್ರಭುತ್ವದ ಮೂಲಾಧಾರವೇ ಜನರ ಮತದಾನದ ಹಕ್ಕು. ಆ ಹಕ್ಕನ್ನು ದುರ್ಬಲಗೊಳಿಸುವ ಯಾವುದೇ ಪ್ರಯತ್ನವನ್ನು ಕಾಂಗ್ರೆಸ್ ಪಕ್ಷ ಸಹಿಸುವುದಿಲ್ಲ. ಸಂವಿಧಾನದ ಮೌಲ್ಯಗಳು ಹಾಗೂ ಪ್ರಜಾಪ್ರಭುತ್ವದ ರಕ್ಷಣೆಗಾಗಿ ಪಕ್ಷದ ಕಾರ್ಯಕರ್ತರು ನಿರಂತರ ಹೋರಾಟ ನಡೆಸಲಿದ್ದಾರೆ.

2ನೇ ಪುಟಕ್ಕೆ

## ರೈತರ ಜೋಳದ ಬಾಕಿ ₹109 ಕೋಟಿ ಡಿಬಿಟಿ ಮೂಲಕ ಪಾವತಿ: ತಹಶೀಲ್ದಾರ್ ಭೀಮರಾಯ



ಮಾನ್ವಿ: ತಾಲೂಕಿನ ಹಿಂಗಾರು ಹಂಗಾಮಿನಲ್ಲಿ ಸರ್ಕಾರದ ಖರೀದಿ ಕೇಂದ್ರಗಳ ಮೂಲಕ ಜೋಳ ಮಾರಾಟ ಮಾಡಿರುವ ರೈತರಿಗೆ ಬಾಕಿ ಉಳಿದಿರುವ ₹109 ಕೋಟಿ ಹಣವನ್ನು ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ರೈತರ ಬ್ಯಾಂಕ್ ಖಾತೆಗಳಿಗೆ ಪಾವತಿಸಲಾಗುತ್ತಿದೆ ಎಂದು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ತಿಳಿಸಿದರು.

ಈ ಕುರಿತು ಮಾಹಿತಿ ನೀಡಿದ ಅವರು, 202526ನೇ ಸಾಲಿನಲ್ಲಿ ರಾಜ್ಯದ ರೈತರಿಂದ ಭತ್ತ, ರಾಗಿ, ಜೋಳ ಸೇರಿದಂತೆ ವಿವಿಧ ಆಹಾರಧಾನ್ಯಗಳನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲಾಗಿದ್ದು, ರೈತರಿಗೆ ಪಾವತಿಸಬೇಕಾದ ಬಾಕಿ ಹಣ ಬಿಡುಗಡೆಗೆ ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಬಿಡುಗಡೆಯಾಗಿರುವ ₹406 ಕೋಟಿ ಮೊತ್ತವನ್ನು ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಆವರ್ತ ನಿಧಿಯಿಂದ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಗೆ ಜಮೆ ಮಾಡಲಾಗಿದೆ. ಈ ಅನುದಾನದ ಮೂಲಕ ಆಹಾರಧಾನ್ಯ ಮಾರಾಟ ಮಾಡಿದ ರೈತರಿಗೆ ಬಾಕಿ ಹಣ

2ನೇ ಪುಟಕ್ಕೆ

# ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ ಅಂಗವಾಗಿ ರಕ್ತದಾನ ಶಿಬಿರ: ಸಮಾಜಮುಖಿ ಕಾರ್ಯಕ್ಕೆ ಗಣ್ಯರ ಮೆಚ್ಚುಗೆ

ರಾಯಚೂರು, ಅ.9: ರಾಯಚೂರು ರಿಪೋರ್ಟರ್ಸ್ ಗಿಲ್ಡ್ ತನ್ನ 25 ವರ್ಷಗಳ ಸಾರ್ಥಕ ಪಯಣದ ಬೆಳ್ಳಿ ಮಹೋತ್ಸವವನ್ನು ಕೇವಲ ಸಂಭ್ರಮಾಚರಣೆಗೆ ಸೀಮಿತಗೊಳಿಸದೆ, ಜೀವ ಉಳಿಸುವ ಮಹತ್ವದ ರಕ್ತದಾನ ಶಿಬಿರ ಆಯೋಜಿಸುವ ಮೂಲಕ ಸಮಾಜಮುಖಿ ಕಾರ್ಯಕ್ಕೆ ಮುಂದಾಗಿರುವುದು ಶ್ಲಾಘನೀಯ ಎಂದು ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಅಭಿಪ್ರಾಯಪಟ್ಟರು.

ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಹಾಗೂ ರೋಟರಿ ಜನಸೇವಾ ಪ್ರತಿಷ್ಠಾನ ರಕ್ತ ಕೇಂದ್ರದ ಸಹಯೋಗದಲ್ಲಿ ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಆಯೋಜಿಸಿದ್ದ ರಕ್ತದಾನ ಶಿಬಿರಕ್ಕೆ ರಾಯಚೂರು ನಗರ ಶಾಸಕ ಡಾ. ಶಿವರಾಜ ಪಾಟೀಲ ಅವರೊಂದಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸಂಸ್ಥೆಯೊಂದು ತನ್ನ ಬೆಳ್ಳಿ ಮಹೋತ್ಸವವನ್ನು ಅದ್ಧೂರಿ ಕಾರ್ಯಕ್ರಮಗಳಿಗೆ ಮಾತ್ರ ಸೀಮಿತಗೊಳಿಸದೆ, ಸಾರ್ವಜನಿಕರ ಹಿತದೃಷ್ಟಿಯಿಂದ ರಕ್ತದಾನದಂತಹ ಮಾನವೀಯ ಕಾರ್ಯಕ್ಕೆ ಆದ್ಯತೆ ನೀಡಿರುವುದು ಇತರ ಸಂಘಟನೆಗಳಿಗೂ ಮಾದರಿಯಾಗಿದೆ. ಅಪಘಾತ, ತುರ್ತು ಶಸ್ತ್ರಚಿಕಿತ್ಸೆ ಹಾಗೂ ಗಂಭೀರ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವ ರೋಗಿಗಳಿಗೆ ಸಕಾಲದಲ್ಲಿ ರಕ್ತ ದೊರೆತರೆ ಅಮೂಲ್ಯ ಜೀವಗಳನ್ನು ಉಳಿಸಬಹುದು. ಈ ನಿಟ್ಟಿನಲ್ಲಿ ಪತ್ರಕರ್ತರು ಕೈಗೊಂಡಿರುವ ಸೇವಾ ಕಾರ್ಯ ಅಭಿನಂದನಾರ್ಹ ಎಂದು ಹೇಳಿದರು.



ಶಾಸಕ ಡಾ. ಶಿವರಾಜ ಪಾಟೀಲ ಮಾತನಾಡಿ, ವೈದ್ಯಕೀಯ ವಿಜ್ಞಾನ ಸಾಕಷ್ಟು ಪ್ರಗತಿ ಸಾಧಿಸಿದ್ದರೂ ಮಾನವನ ರಕ್ತವನ್ನು ಕೃತಕವಾಗಿ ಉತ್ಪಾದಿಸಲು ಇಂದಿಗೂ ಸಾಧ್ಯವಾಗಿಲ್ಲ. ಹೀಗಾಗಿ ರಕ್ತದಾನಕ್ಕೆ ಪರ್ಯಾಯವಿಲ್ಲ. ಆರೋಗ್ಯವಂತ ವ್ಯಕ್ತಿಗಳು ಸ್ವಯಂಪ್ರೇರಣೆಯಿಂದ ರಕ್ತದಾನ ಮಾಡುವ ಮೂಲಕ ಸಂಕಷ್ಟದಲ್ಲಿರುವ ರೋಗಿಗಳ ಜೀವ ರಕ್ಷಣೆಗೆ ನೆರವಾಗಬೇಕು ಎಂದು ಕರೆ ನೀಡಿದರು.

ರಕ್ತದಲ್ಲಿರುವ ಕೆಂಪು ರಕ್ತಕಣಗಳು, ಪ್ಲೇಟ್‌ಲೆಟ್ ಗಳು ಹಾಗೂ ಫ್ರೆಶ್ ಫ್ರೋಜನ್ ಪ್ಲಾಸ್ಮಾ ಸೇರಿದಂತೆ ವಿವಿಧ ಘಟಕಗಳು ಚಿಕಿತ್ಸೆಯಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತವೆ. ವಿಶೇಷವಾಗಿ ಹೆರಿಗೆ ಸಂದರ್ಭದಲ್ಲಿ ಅಧಿಕ ರಕ್ತಸ್ರಾವ, ರಸ್ತೆ ಅಪಘಾತಗಳು ಹಾಗೂ ತುರ್ತು ಶಸ್ತ್ರಚಿಕಿತ್ಸೆಗಳಲ್ಲಿ ರಕ್ತದ ಅವಶ್ಯಕತೆ ಹೆಚ್ಚಿರುತ್ತದೆ. ಇಂತಹ ಸಂದರ್ಭಗಳಲ್ಲಿ ರಕ್ತದ ಲಭ್ಯತೆಯೇ ರೋಗಿಯ ಜೀವ ಉಳಿಸುವಲ್ಲಿ ನಿರ್ಣಾಯಕವಾಗುತ್ತದೆ ಎಂದು

2ನೇ ಪುಟಕ್ಕೆ

## ಸಕಾಲಕ್ಕೆ ಮಾಹಿತಿ ನೀಡದ ಅಧಿಕಾರಿಗಳಿಗೆ ಮಾಹಿತಿ ಆಯೋಗದಿಂದ ದಂಡ ವಿಧಿಸಿ ಆದೇಶ

ರಾಯಚೂರು ಅ. 09 (ಕರ್ನಾಟಕ ವಾರ್ತೆ): ಸಕಾಲಕ್ಕೆ ಮಾಹಿತಿ ನೀಡಲು ಹಾಗೂ ವಿಚಾರಣೆಗೆ ಹಾಜರಾಗದೆ ನಿರ್ಲಕ್ಷ್ಯ ವಹಿಸಿದ ವಿವಿಧ ಸಾರ್ವಜನಿಕ ಪ್ರಾಧಿಕಾರದ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠ ದಂಡ ವಿಧಿಸಿ ಆದೇಶ ಮಾಡಿದೆ.

ಮೇಲ್ಮನವಿದಾರರು ಮಾಹಿತಿ ಕೋರಿ ಅರ್ಜಿ ಸಲ್ಲಿಸಿದ್ದು, ಅವರಿಗೆ ಪ್ರತಿವಾದಿಗಳು ಸಕಾಲಕ್ಕೆ ಮಾಹಿತಿ ನೀಡದ ಕಾರಣ ಮೇಲ್ಮನವಿದಾರ ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠದ ಮುಂದೆ ಸಲ್ಲಿಸಿದ ದ್ವಿತೀಯ ಮೇಲ್ಮನವಿಯ ವಿಚಾರಣೆ ನಡೆಸಿದ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಬಿ.ವೆಂಕಟ ಸಿಂಗ್ ಐವರು ಅಧಿಕಾರಿಗಳಿಗೆ ತಲಾ 10 ಸಾವಿರದಂತೆ ಒಟ್ಟು 50 ಸಾವಿರ ದಂಡ ವಿಧಿಸಿ ಆದೇಶ ಮಾಡಿದ್ದಾರೆ.



10 ಸಾವಿರ ರಾಯಚೂರು ತಾಲೂಕಿನ ಮೇಲ್ಮನವಿದಾರರಿಗೆ ಮಾಹಿತಿ ನೀಡಿ, ಅವರಿಗೆ ನೀಡಿದ ಮಾಹಿತಿ ಮತ್ತು ಸ್ವೀಕೃತಿ ಪತ್ರಿಯನ್ನು ಆಯೋಗಕ್ಕೆ ಸಲ್ಲಿಸುವಂತೆ ಆಯೋಗ ಮಾಡಿದ ಆದೇಶ ಪಾಲನೆ ಮಾಡದೆ ನಿರ್ಲಕ್ಷ್ಯ ಮಾಡಿದ ಕಾರಣ ಈ ಹಿಂದೆ ಬಸವಕಲ್ಯಾಣ ನಗರಸಭೆ ಪ್ರಥಮ ದರ್ಜೆ ಸಹಾಯಕರಾಗಿದ್ದ ಸೂರ್ಯಕಾಂತಗೆ ಬೋಳಮಾನದೊಡ್ಡಿ ಗ್ರಾಮಪಂಚಾಯತ ಕಾರ್ಯದರ್ಶಿ ಮಲ್ಲಿಕಾರ್ಜುನಗೆ 10 ಸಾವಿರ, ಕಲಬುರಗಿ ಪಾಲಿಕೆ ಪರಿಸರ ಅಭಿಯಂತ ಅಭಯಕುಮಾರಗೆ 10 ಸಾವಿರ, ಕುಷ್ಟಗಿ ತಾಲೂಕಿನ ಜುಮ್ಮಾಪೂರ ಗ್ರಾಮ ಪಂಚಾಯತ್ ಕಾರ್ಯದರ್ಶಿ ಗುರಪ್ಪ ನಾಯಕಗೆ 10 ಸಾವಿರ ಹಾಗೂ ಹೊಸಪೇಟೆ ತಾಲೂಕಿನ ನಾಗಲಾಪುರ ಗ್ರಾಮ ಪಂಚಾಯತ್ ಕಾರ್ಯದರ್ಶಿ ರವಿಕುಮಾರಗೆ 10 ಸಾವಿರ ದಂಡ ವಿಧಿಸಿ ಆದೇಶ ಮಾಡಲಾಗಿದೆ.

2ನೇ ಪುಟಕ್ಕೆ

## ಮಕ್ಕಳ ಜನನದ ನಡುವೆ ಅಂತರ ಕಾಯ್ದುಕೊಳ್ಳಲು ಗರ್ಭನಿರೋಧಕ ಇಂಪ್ಲಾಂಟ್ ಪರಿಣಾಮಕಾರಿ: ಡಾ. ಚಂದ್ರಿಕಾ ಬಿ.ಆರ್.

ರಾಯಚೂರು, ಅ.8: ತಾಯಿ ಮತ್ತು ಮಗುವಿನ ಆರೋಗ್ಯ ರಕ್ಷಣೆಗಾಗಿ ಮಕ್ಕಳ ಜನನದ ನಡುವೆ ಸೂಕ್ತ ಅಂತರ ಕಾಯ್ದುಕೊಳ್ಳುವುದು ಅತ್ಯಂತ ಅಗತ್ಯವಾಗಿದ್ದು, ಕುಟುಂಬ ಕಲ್ಯಾಣ ಕಾರ್ಯಕ್ರಮದಡಿ ಹೊಸದಾಗಿ ಪರಿಚಯಿಸಲಾಗುತ್ತಿರುವ ಚರ್ಮದಡಿಯ ಗರ್ಭನಿರೋಧಕ ಇಂಪ್ಲಾಂಟ್ ವಿಧಾನವು ಮಹಿಳೆಯರಿಗೆ ಸುರಕ್ಷಿತ ಹಾಗೂ ಪರಿಣಾಮಕಾರಿ ಆಯ್ಕೆಯಾಗಿದೆ ಎಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದ ಕುಟುಂಬ ಕಲ್ಯಾಣ ಕಾರ್ಯಕ್ರಮದ ಉಪ ನಿರ್ದೇಶಕಿ ಡಾ. ಚಂದ್ರಿಕಾ ಬಿ.ಆರ್. ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ವಿಭಾಗ ಹಾಗೂ ವಿಶ್ವ ಆರೋಗ್ಯ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ



ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಕೃಷ್ಣಾ ಸಭಾಂಗಣದಲ್ಲಿ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ವೈದ್ಯಾಧಿಕಾರಿಗಳು ಹಾಗೂ ಆರೋಗ್ಯ ಸಿಬ್ಬಂದಿಗಾಗಿ ಆಯೋಜಿಸಿದ್ದ ನೂತನ ಗರ್ಭನಿರೋಧಕ ಇಂಪ್ಲಾಂಟ್ ಅಳವಡಿಕೆ ಕುರಿತ ಪುನರ್ ಮನನ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕುಟುಂಬ ಕಲ್ಯಾಣ ಯೋಜನೆಯಡಿ ಈಗಾಗಲೇ ಗರ್ಭನಿರೋಧಕ ಚುಚ್ಚುಮದ್ದು, ಪಿಪಿಐಯುಸಿಡಿ, ಛಾಯಾ ಮಾತ್ರೆ ಹಾಗೂ ಪುರುಷರಿಗೆ ನಿರೋಧ್ ಸೇರಿದಂತೆ ವಿವಿಧ ಗರ್ಭನಿರೋಧಕ ಸೇವೆಗಳನ್ನು ಒದಗಿಸಲಾಗುತ್ತಿದೆ. ಇದರ ಮುಂದುವರಿದ ಭಾಗವಾಗಿ ಮಹಿಳೆಯರಿಗೆ ದೀರ್ಘಕಾಲದವರೆಗೆ ಗರ್ಭಧಾರಣೆ ತಡೆಯಲು

2ನೇ ಪುಟಕ್ಕೆ

## ಮಮದಾಪುರದಲ್ಲಿ ಅ.11ರಿಂದ 21ರವರೆಗೆ ಶರನ್ನವರಾತ್ರಿ ದಸರಾ ಮಹೋತ್ಸವ: ವಿಶೇಷ ಪೂಜೆ, ಸಾಂಸ್ಕೃತಿಕ ಕಾರ್ಯಕ್ರಮ

ರಾಯಚೂರು, ಅ.9: ತಾಲೂಕಿನ ಮಮದಾಪುರ ಗ್ರಾಮದ ಶ್ರೀ ಗಧಾರ ಮಾರಿಕಾಂಬ ದೇವಿ ದೇವಸ್ಥಾನದಲ್ಲಿ ಅಕ್ಟೋಬರ್ 11ರಿಂದ 21ರವರೆಗೆ 13ನೇ ವರ್ಷದ ಶರನ್ನವರಾತ್ರಿ ದಸರಾ ಮಹೋತ್ಸವವನ್ನು ವಿವಿಧ ಧಾರ್ಮಿಕ, ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಸರವಪ್ಪ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಗಧಾರ ಮಾರಿಕಾಂಬ ದೇವಸ್ಥಾನ ಸೇವಾ ಸಮಿತಿ ವತಿಯಿಂದ ಮಹೋತ್ಸವಕ್ಕೆ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಪ್ರತಿದಿನ ದೇವಿಗೆ ವಿಶೇಷ ಪೂಜೆ, ಅಲಂಕಾರ, ಭಜನೆ, ಪ್ರವಚನ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಅಕ್ಟೋಬರ್ 11ರಂದು ವಿಶೇಷ ಪೂಜಾ ಕಾರ್ಯಕ್ರಮಗಳೊಂದಿಗೆ ಮಹೋತ್ಸವಕ್ಕೆ



ಚಾಲನೆ ನೀಡಲಾಗುವುದು. ಅ.12ರಂದು ಗಾನಸುಧಾ ಕಲಾಬಳಗದಿಂದ ಸಂಗೀತ ಕಾರ್ಯಕ್ರಮ, ಅ.13ರಂದು ವಿಶೇಷ ಸಂಗೀತ ಕಾರ್ಯಕ್ರಮ, ಅ.14ರಂದು ಗುರುಪಾದ ಪೂಜೆ ಹಾಗೂ ಅ.15ರಂದು ಸಂಜೆ 6.30ರಿಂದ ರಾತ್ರಿ 8.30ರವರೆಗೆ ಲಿಂಗಸುಗೂರಿನ ಹುಸೇನ್ ಸಾಬ್ ಅವರ ನೇತೃತ್ವದಲ್ಲಿ ಭಕ್ತಿ ಸಿಂಚನ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದರು.

ಅ.16ರಂದು ವಿಶೇಷ ಸತ್ಸಂಗ, ಅ.17ರಂದು ಕಲ್ಯಾಣ ನಾಡಿನ ಸಾಧಕರೊಂದಿಗೆ ಮಕ್ಕಳ ಸಂವಾದ, ಅ.18ರಂದು ಮಮದಾಪುರ ಹಾಗೂ ನೆಲಹಾಳ ಗ್ರಾಮದ ಶಾಲಾ ಮಕ್ಕಳಿಂದ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಅ.19ರಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ರಾಜಯೋಗಿನಿ ಶ್ವೇತಾ ಅಕ್ಕನವರಿಂದ ಆಧ್ಯಾತ್ಮಿಕ ಪ್ರವಚನ ನಡೆಯಲಿದೆ ಎಂದು ವಿವರಿಸಿದರು.

ಅಕ್ಟೋಬರ್ 20ರಂದು ಮಹಾನವಮಿ ಪ್ರಯುಕ್ತ ಆಯುಧ ಪೂಜೆ, ಭಜನೆ ಹಾಗೂ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಅಕ್ಟೋಬರ್ 21ರಂದು ವಿಜಯದಶಮಿಯ ಅಂಗವಾಗಿ ದೇವಿಗೆ ವಿಶೇಷ ಪೂಜೆ ನೆರವೇರಿಸಲಾಗುವುದು.

2ನೇ ಪುಟಕ್ಕೆ

## ಅ. 12 ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ರಾಯಚೂರು ಅ. 09 (ಕರ್ನಾಟಕ ವಾರ್ತೆ): ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಅಕ್ಟೋಬರ್ 12ರ ಬೆಳಿಗ್ಗೆ 10 ಗಂಟೆಯಿದ ಮಧ್ಯಾಹ್ನ 1 ಗಂಟೆವರಗ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರ.

ಅರ್ಹತೆಗಳು: ಎಲ್ಲಾ ಪದವೀಧರರು ಆಸಕ್ತ 18 ರಿಂದ 28 ವರ್ಷಗಳ ವರಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾರ್ಕ್ಸ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶಡ್ ರಸ್ಥೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9008211750, 8197930236, 9916931616 ಗ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ್‌ಕುಮಾರ್ ಸಂಗೇಪಾಗ್ ಅವರು ಪ್ರಕಟಣಯಲ್ಲಿ ತಿಳಿಸಿದ್ದಾರ.

## ಅಪರಿಚಿತ ಗಂಡಸ್ಸು ಮೃತದೇಹ ಪತ್ತೆ



ರಾಯಚೂರು ಅ. 09 (ಕರ್ನಾಟಕ ವಾರ್ತೆ): ಚೇಗುಂಟ ಮತ್ತು ಸೈದಾಪೂರ ರೈಲ್ವೇ ನಿಲ್ದಾಣಗಳ ಮದ್ಯೆ ರೈಲ್ವೇ ಕೀ.ಮೀ ನಂ 601/5-3 ನೇದ್ದರಲ್ಲಿ ಯಾವುದೋ ಚಲಿಸುವ ರೈಲು ಗಾಡಿಯಿಂದ ಸುಮಾರು 40 ವರ್ಷ ದ ಅಪರಿಚಿತ ಗಂಡಸ್ಸು ಆಯಾತಪ್ಪಿ ಬಿದ್ದು ಆಕಸ್ಮಿಕವಾಗಿ ಮೃತಪಟ್ಟಿದ್ದು, ರಾಯಚೂರು ರೈಲ್ವೇ ಪೊಲೀಸ್ ಠಾಣೆಯಲ್ಲಿ ಯು.ಡಿ.ಆರ್ 63/2026 ಕಲಂ 194 ಬಿ.ಎನ್.ಎಸ್.ಎಸ್ ರಿತ್ಯಾ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

ಮೃತದೇಹ ದೊರೆತ ಘಟನಾ ಸ್ಥಳಗಳಲ್ಲಿ ಮೃತನ ವಾರಸುದಾರರು ಯಾರು ಪತ್ತೆಯಾಗಿರುವುದಿಲ್ಲ. ಆದ್ದರಿಂದ ಮೃತದೇಹವನ್ನು ರಾಯಚೂರು ರಿಮ್ಸ್ ಆಸ್ಪತ್ರೆಯಲ್ಲಿ ವಾರುಸುದಾರ ಪತ್ತೆ ಹಾಗೂ ಪಿ.ಎಂ.ಇ. ಸಲುವಾಗಿ ರಿಮ್ಸ್ ಆಸ್ಪತ್ರೆಯ ಶೀತಲ ಶವಗಾರದಲ್ಲಿ ಇಡಲಾಗಿದೆ.

ಅಪರಿಚಿತ ಗಂಡಸ್ಸು ವಯಸ್ಸು ಸುಮಾರು 40 ವರ್ಷ, ಎತ್ತರ ಸುಮಾರು 5.2 ಅಡಿ, ದಪ್ಪ ಮುಖ, ಸಣ್ಣ ಮೂಗು, ಕಪ್ಪು ಕಣ್ಣುಗಳು, ತಲೆಯಲ್ಲಿ ಎರಡು ಇಂಚು ಕಪ್ಪು ಮತ್ತು ಬಿಳಿ ಕೂದಲು, ಸಣ್ಣ ಗಡ್ಡ ಮೀಸೆ, ದಪ್ಪ ಶರೀರ, ಉಬ್ಬಿದ ಹೊಟ್ಟೆ, ಗಡ್ಡ ಮೀಸೆ ಮತ್ತು ತಲೆಯ ಕೂದಲಿಗೆ ಹೇರ್ ಡೈ ಹಾಕಿಸಿರುತ್ತಾನೆ.

ಒಂದು ಬಿಳಿ ಮತ್ತು ಹಳದಿ ಬಣ್ಣ ಮಿಶ್ರಿತ ತುಂಬ ತೋಳಿನ ಶರ್ಟ್, ಒಂದು ನೀಲಿ ಬಣ್ಣದ ನೈಟ್ ಪ್ಯಾಂಟ್, ಬಿಳಿ ಮತ್ತು ಬ್ರೌನ್ ಮಿಶ್ರಿತ ಚೆಕ್ಸ ಟಾವೆಲ್ ಹೊರತು ಮೈಮೇಲೆ ಯಾವುದೇ ಬಟ್ಟೆಗಳು ಕಂಡುಬದಿರುವುದಿಲ್ಲ.

ಈ ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಸದರಿ ಮೃತನ ಹೋಲಿಕೆಯ ಪುರುಷ ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂ.ನಂ: 08532-231716 ಅಥವಾ ಮೊ.ನಂ: 9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080-22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರೈಲ್ವೆ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ. 12ರಂದು ಮ್ಯಾರಥಾನ್ ಓಟ ಸ್ಪರ್ಧೆ

ರಾಯಚೂರು ಅ. 09 (ಕರ್ನಾಟಕ ವಾರ್ತೆ): ಜಿಲ್ಲಾ ಮಟ್ಟದಲ್ಲಿ 17 ರಿಂದ 25 ವರ್ಷದ ಕಾಲೇಜು ವಿದ್ಯಾರ್ಥಿಗಳಿಗೆ ಯುವ ಜನರಲ್ಲಿ ಹೆಚ್ .ಐ.ವಿ/ಏಡ್ಸ್ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ರೆಡ್ ರಿಬ್ಬನ್ ರನ್ 5 ಕಿ.ಮೀ ಮ್ಯಾರಥಾನ್ ಓಟದ ಸ್ಪರ್ಧೆಯನ್ನು ಅಕ್ಟೋಬರ್ 12ರ ಬೆಳಿಗ್ಗೆ 06ಗಂಟೆಗೆ ಠಾಗೋರ್ ಸ್ಮಾರಕ ಪ್ರೌಢ ಶಾಲೆ (ಸ್ಟೇಡಿಯಂ)ಯಿದ ಅತಿಥಿ ಹೊಟೇಲ್ ವರೆಗೆ ತಲುಪಿ ಅಲ್ಲಿಂದ ಪುನಃ ತಿರುಗಿ ಠಾಗೋರ್ ಸ್ಮಾರಕ ಪ್ರೌಢ ಶಾಲೆ (ಜಿಲ್ಲಾ ಕ್ರೀಡಾಂಗಣದ ಹತ್ತಿರ)ವರೆಗೆ ಹಮ್ಮಿಕೊಳ್ಳಲಾಗಿದ್ದು, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾ ಏಡ್ಸ್ ತಡೆ ಮತ್ತು ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಮೃತ ವಾಣಿ**

ದೇಹವು ಶೃಂಗಾರಕ್ಕಾಗಿ ಆತ್ಮವು ಸಂಸ್ಕಾರಕ್ಕಾಗಿ.

**1611 ನೇಯ ದಿನಕ್ಕೆ ಏಮ್ಸ್ ಹೋರಾಟ**

## ಶ್ರೀಮಠದ ನೂತನ ದಾಸೋಹ ಭವನ ನಿರ್ಮಾಣಕ್ಕೆ ನ.10ರಂದು ಭೂಮಿಪೂಜೆ



ಮಾನ್ವಿ, ಅ.9: ತಾಲೂಕಿನ ಚಿಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳ ನೇತೃತ್ವದಲ್ಲಿ ತಮಗೆಲ್ಲಿರೂ ಶ್ರೀಮಠದ ನೂತನ ದಾಸೋಹ ಭವನ ನಿರ್ಮಾಣಕ್ಕೆ ನವೆಂಬರ್ 10ರಂದು ಭೂಮಿಪೂಜೆ ನೆರವೇರಿಸಲು ನಿರ್ಧರಿಸಲಾಗಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಶ್ರೀಮಠಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ನೂತನ ದಾಸೋಹ ಭವನ ನಿರ್ಮಾಣಕ್ಕೆ ಮುಂದಾಗಿದ್ದು, ಈ ಹಿನ್ನೆಲೆಯಲ್ಲಿ ಭವನ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಲು ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ.

ದಾಸೋಹ ಭವನ ನಿರ್ಮಾಣ ಕಾರ್ಯಕ್ಕೆ ಅಗತ್ಯವಾದ ಸ್ಥಳವನ್ನು ಗುರುತಿಸಲಾಗಿದ್ದು, ನವೆಂಬರ್ 10ರಂದು ಭೂಮಿಪೂಜೆ ನೆರವೇರಿಸುವ ಮೂಲಕ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಅಧಿಕೃತ ಚಾಲನೆ ನೀಡಲಾಗುವುದು.

ಇದೇ ಸಂದರ್ಭದಲ್ಲಿ ಅಕ್ಟೋಬರ್ 31ರ ಶನಿವಾರ ಹಾಗೂ ನವೆಂಬರ್ 1ರ ಭಾನುವಾರ ಎರಡು ದಿನಗಳ ಕಾಲ ಶ್ರೀಮಠದಲ್ಲಿ ಸಂಪೂರ್ಣ ಹಳೆ ಕಟ್ಟಡವನ್ನು ತೆರವುಗೊಳಿಸುವ ಸೇವಾ ಕಾರ್ಯ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯದಲ್ಲಿ ಭಕ್ತರು ಹಾಗೂ ಸಾರ್ವಜನಿಕರು ಸ್ವಯಂಪ್ರೇರಿತವಾಗಿ ಪಾಲ್ಗೊಂಡು ಸಹಕರಿಸುವಂತೆ ಶ್ರೀಮಠದ ವತಿಯಿಂದ ಮನವಿ ಮಾಡಲಾಗಿದೆ.

ಹಳೆಯ ಕಟ್ಟಡವನ್ನು ತೆರವುಗೊಳಿಸುವ ಸಂದರ್ಭದಲ್ಲಿ ಅಗತ್ಯವಾದ ವಾಹನಗಳು ಹಾಗೂ ಇತರ ಸೌಲಭ್ಯಗಳೊಂದಿಗೆ ಆಗಮಿಸಿ ಸೇವಾ ಕಾರ್ಯದಲ್ಲಿ ಭಾಗವಹಿಸುವಂತೆ ಭಕ್ತರಿಗೆ ಕರೆ ನೀಡಲಾಗಿದೆ.

ಶ್ರೀಮಠದ ಅಭಿವೃದ್ಧಿ ಹಾಗೂ ಭಕ್ತರ ಅನುಕೂಲಕ್ಕಾಗಿ ಕೈಗೊಂಡಿರುವ ಈ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕು. ಅಕ್ಟೋಬರ್ 31 ಮತ್ತು ನವೆಂಬರ್ 1ರಂದು ನಡೆಯುವ ಸೇವಾ ಕಾರ್ಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ನೂತನ ದಾಸೋಹ ಭವನ ನಿರ್ಮಾಣಕ್ಕೆ ಸಹಕಾರ ನೀಡಬೇಕು ಎಂದು ಶ್ರೀ ಸದಾಶಿವ ಮಹಾಸ್ವಾಮಿಗಳು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

ಸಂಪರ್ಕಿಸಿ
ನಿಮ್ಮ ವಿಶ್ವಾಸ ಅರ್ಹ ಪತ್ರಿಕೆಯ
ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
98863 85685
tungabimba@gmail.com

## ಸಕಾಲಕ್ಕೆ ಮಾಹಿತಿ ನೀಡದ ಅಧಿಕಾರಿಗಳಿಗೆ ಮಾಹಿತಿ ಆಯೋಗದಿಂದ ದಂಡ ವಿಧಿಸಿ ಆದೇಶ

ಪ್ರತಿವಾದಿ ಅಧಿಕಾರಿಗಳಿಗೆ ವಿಧಿಸಿದ ದಂಡ ಅವರ ಬರುವ ತಿಂಗಳ ವೇತನದಲ್ಲಿ ಕಡಿತಗೊಳಿಸಿ ಆಯೋಗ ಸೂಚಿಸಿದ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಿ ರಶೀದಿ ಆಯೋಗಕ್ಕೆ ಸಲ್ಲಿಸಲು ಅನುಕ್ರಮವಾಗಿ ದಂಡನೆಗೊಳಪಟ್ಟ ಮೇಲಾಧಿಕಾರಿಗಳಿಗೆ ಆಯೋಗ ಆದೇಶ ಮಾಡಿದೆ.

ಆಯೋಗದ ಆದೇಶ ದಂಡ ಪಾವತಿ ಮಾಡಬೇಕು ಹಾಗೂ ಆಯೋಗದ ಆದೇಶ ತಲುಪಿದ ತಕ್ಷಣವೇ ಮೇಲ್ಮನವಿದಾರರಿಗೆ ಮಾಹಿತಿ ನೀಡಿ ಅದರ ಪ್ರತಿ ಮತ್ತು ಸ್ವೀಕೃತಿ ಪತ್ರ ಆಯೋಗಕ್ಕೆ ಸಲ್ಲಿಸಿ ಮುಂದಿನ ವಿಚಾರಣೆಗೆ ಹಾಜರಾಗುವಂತೆ ಪ್ರತಿವಾದಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಅಧಿನಿಯಮ 2005 ರ 18 (3) ರಡಿ ಆದೇಶಿಸಿ, ತಪ್ಪಿದಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005 ರ 20 (2) ರಡಿ ಎಚ್ಚರಿಕೆ ನೀಡಿದೆ. ಹಾಗೂ ಪ್ರತಿವಾದಿಗಳ ಪ್ರಥಮ ಮೇಲ್ಮನವಿ ಪ್ರಾಧಿಕಾರದ ಅಧಿಕಾರಿಗಳು ಈ ಕುರಿತು ಕ್ರಮ ವಹಿಸಲು ಸೂಚನೆ ನೀಡಿ ತಪ್ಪಿದಲ್ಲಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡುವುದಾಗಿ ಎಚ್ಚರಿಕೆ ನೀಡಿದೆ.

## ಮಕ್ಕಳಜನನದನಡುವೆಅಂತರಕಾಯ್ದುಕೊಳ್ಳಲುಗರ್ಭನಿರೋಧಕ ಇಂಪ್ಲಾಂಟ್ ಪರಿಣಾಮಕಾರಿ: ಡಾ. ಚಂದ್ರಿಕಾ ಬಿ.ಆರ್.

ಅನುಕೂಲವಾಗುವ ಚರ್ಮದಡಿಯ ಗರ್ಭನಿರೋಧಕ ಇಂಪ್ಲಾಂಟ್ ವಿಧಾನವನ್ನು ಪರಿಚಯಿಸಲಾಗುತ್ತಿದೆ ಎಂದು ವಿವರಿಸಿದರು.

ಬೆಂಕಿಕಡ್ಡಿಯ ಗಾತ್ರದಲ್ಲಿರುವ ಸಣ್ಣ ಹಾಗೂ ಹೊಂದಿಕೊಳ್ಳುವ ಇಂಪ್ಲಾಂಟ್ ರಾಡ್ ಅನ್ನು ವಿಶೇಷ ತರಬೇತಿ ಪಡೆದ ವೈದ್ಯರು ಮಹಿಳೆಯ ಮೇಲ್ತೋಳಿನ ಚರ್ಮದ ಕೆಳಭಾಗದಲ್ಲಿ ಅಳವಡಿಸುತ್ತಾರೆ. ಒಮ್ಮೆ ಅಳವಡಿಸಿದರೆ ಸುಮಾರು ಮೂರು ವರ್ಷಗಳವರೆಗೆ ಗರ್ಭಧಾರಣೆಯನ್ನು ತಡೆಯಲು ನೆರವಾಗುತ್ತದೆ. ಈ ವಿಧಾನವು ಅಂಡಾಣು ಬಿಡುಗಡೆಯನ್ನು ತಡೆಯುವುದರ ಜೊತೆಗೆ ಗರ್ಭಕಂಠದ ಲೋಳೆಯನ್ನು ದಪ್ಪವಾಗಿಸಿ ವೀರ್ಯಾಣುಗಳು ಅಂಡಾಣುವನ್ನು ತಲುಪದಂತೆ ಮಾಡುತ್ತದೆ ಎಂದು ಮಾಹಿತಿ ನೀಡಿದರು.

ಇದು ಹಾರ್ಮೋನ್ ಆಧಾರಿತ, ಹೆಚ್ಚು ಪರಿಣಾಮಕಾರಿಯಾದ ಹಾಗೂ ಅಗತ್ಯವಿದ್ದಾಗ ತೆಗೆದುಹಾಕಬಹುದಾದ ಗರ್ಭನಿರೋಧಕ ವಿಧಾನವಾಗಿದೆ. ಮಹಿಳೆಯರ ಆರೋಗ್ಯ ಸ್ಥಿತಿ ಮತ್ತು ವೈದ್ಯಕೀಯ ಸಲಹೆಗೆ ಅನುಗುಣವಾಗಿ ಈ ಸೌಲಭ್ಯವನ್ನು ಬಳಸಿಕೊಳ್ಳಬಹುದು. ಅರ್ಹ ದಂಪತಿಗಳಿಗೆ ಕುಟುಂಬ ಯೋಜನೆಯ ಕುರಿತು ಸೂಕ್ತ ಮಾರ್ಗದರ್ಶನ ನೀಡುವುದರಿಂದ ಅನಪೇಕ್ಷಿತ ಗರ್ಭಧಾರಣೆಗಳನ್ನು ತಡೆಯಲು ಹಾಗೂ ತಾಯಿ ಮತ್ತು ಶಿಶು ಆರೋಗ್ಯವನ್ನು ಉತ್ತಮಪಡಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ. ಶಿವಕುಮಾರ್ ನಾರಾ ಮಾತನಾಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಅವರ ಮಾರ್ಗದರ್ಶನದಲ್ಲಿ ಜಿಲ್ಲೆಯಲ್ಲಿ ಕುಟುಂಬ ಕಲ್ಯಾಣ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ತರಬೇತಿಯಲ್ಲಿ ಭಾಗವಹಿಸಿರುವ ವೈದ್ಯರು ಮತ್ತು ಆರೋಗ್ಯ ಸಿಬ್ಬಂದಿ ಇಂಪ್ಲಾಂಟ್ ವಿಧಾನದ ಕುರಿತು ಸಮಗ್ರ ಮಾಹಿತಿ ಪಡೆದು ಕ್ಷೇತ್ರಮಟ್ಟದಲ್ಲಿ ಅರ್ಹ ದಂಪತಿಗಳಿಗೆ ಅರಿವು ಮೂಡಿಸಬೇಕು ಎಂದರು.

ವಿಶೇಷವಾಗಿ ಗ್ರಾಮೀಣ ಪ್ರದೇಶದ ಮಹಿಳೆಯರಿಗೆ ಕುಟುಂಬ ಯೋಜನೆಯ ವಿವಿಧ ವಿಧಾನಗಳು, ಅವುಗಳ ಪ್ರಯೋಜನಗಳು ಹಾಗೂ ವೈದ್ಯಕೀಯ ಮುನ್ನೆಚ್ಚರಿಕೆಗಳ ಕುರಿತು ಮಾಹಿತಿ ನೀಡುವುದು ಅಗತ್ಯವಾಗಿದೆ. ಆರೋಗ್ಯ ಸಿಬ್ಬಂದಿ ಜನರಲ್ಲಿ ಜಾಗೃತಿ ಮೂಡಿಸುವ ಮೂಲಕ ತಾಯಿ ಮತ್ತು ಮಗುವಿನ ಆರೋಗ್ಯ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಗರ್ಭನಿರೋಧಕ ಇಂಪ್ಲಾಂಟ್ ಅಳವಡಿಕೆಯ ವಿಧಾನ, ಅದರ ಕಾರ್ಯವೈಖರಿ, ಫಲಾನುಭವಿಗಳ ಆಯ್ಕೆ, ವೈದ್ಯಕೀಯ ಸುರಕ್ಷತಾ ಕ್ರಮಗಳು ಹಾಗೂ ಸೇವೆ ಒದಗಿಸುವ ಸಂದರ್ಭದಲ್ಲಿ ಅನುಸರಿಸಬೇಕಾದ ಮಾರ್ಗಸೂಚಿಗಳ ಕುರಿತು ವೈದ್ಯರು ಮತ್ತು ಸಿಬ್ಬಂದಿಗೆ ಮಾಹಿತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ ಸಹಭಾಗಿತ್ವದ ಐಪಿಇ ಗ್ಲೋಬಲ್ ಲಿಮಿಟೆಡ್, ದೆಹಲಿಯ ಕಾರ್ಯಕ್ರಮ ವ್ಯವಸ್ಥಾಪಕಿ ಶೋಭನಾ ಸಿಂಗ್, ಸುರಪುರ ತಾಲೂಕು ಆರೋಗ್ಯಾಧಿಕಾರಿ ಡಾ. ಆರ್.ವಿ. ನಾಯಕ, ಡಾ. ಬನದೇಶ, ಡಾ. ಶರಣಬಸವರಾಜ್, ಡಾ. ಸತೀಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಎಚ್. ದಾಸಪ್ಪನವರ, ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಪುಂಡಲಿಕ ಗಂಜಿ, ಕುಟುಂಬ ಕಲ್ಯಾಣ ವಿಭಾಗದ ಅಮರೇಶ್ ಗಡ್ಡಿ, ನಾಗರಾಜ್ ಜಗತಾಪ್, ಹರೀಶ್ ಪತಂಗೆ, ರಾಜಶೇಖರ್ ಸೇರಿದಂತೆ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ತಜ್ಞ ವೈದ್ಯರು, ತಾಲೂಕು ಆರೋಗ್ಯಾಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು, ಫಾರ್ಮಸಿ ಅಧಿಕಾರಿಗಳು, ಆರೋಗ್ಯ ಮೇಲ್ವಿಚಾರಕರು, ಸಮುದಾಯ ಆರೋಗ್ಯಾಧಿಕಾರಿಗಳು, ಆಶಾ ಮೇಲ್ವಿಚಾರಕರು, ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

## ಮಮದಾಪುರದಲ್ಲಿ ಅ.11ರಿಂದ 21ರವರೆಗೆ ಶರನ್ನವರಾತ್ರಿ ದಸರಾ ಮಹೋತ್ಸವ: ವಿಶೇಷ ಪೂಜೆ, ಸಾಂಸ್ಕೃತಿಕ ಕಾರ್ಯಕ್ರಮ

ಸಂಜೆ 5 ಗಂಟೆಗೆ ದೇವಿಯ ರಥೋತ್ಸವ ನಡೆಯಲಿದ್ದು, ರಥೋತ್ಸವದ ಪೂಜೆ ಹಾಗೂ ಚಾಲನೆ ಕಾರ್ಯಕ್ರಮದಲ್ಲಿ ಗಣ್ಯರು ಮತ್ತು ಭಕ್ತರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಮಹೋತ್ಸವದ ಪ್ರತಿದಿನ ಮಧ್ಯಾಹ್ನ 3ರಿಂದ ಸಂಜೆ 6 ಗಂಟೆಯವರೆಗೆ ಮಾಲಾಧಾರಿಗಳಿಂದ ದೇವಿಗೆ ವಿಶೇಷ ಅಭಿಷೇಕ, ಪೂಜೆ ಹಾಗೂ ಭಜನೆ ನಡೆಯಲಿದೆ. ಪ್ರತಿದಿನ ಅನ್ನದಾಸೋಹದ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ. ಬೆಳಿಗ್ಗೆ 7ರಿಂದ 9 ಗಂಟೆಯವರೆಗೆ ದೇವಿಗೆ ಅಭಿಷೇಕ ಮತ್ತು ವಿಶೇಷ ಪೂಜಾ ಕಾರ್ಯಕ್ರಮಗಳು ನಡೆಯಲಿವೆ ಎಂದು ಹೇಳಿದರು.

ಮಹೋತ್ಸವದ ಎಲ್ಲ ಕಾರ್ಯಕ್ರಮಗಳ ನಿರೂಪಣೆಯನ್ನು ಬಸವರಡ್ಡಿ ಯಾದವ್ ಪೊಲೀಸ್ ಪಾಟೀಲ್ ಅವರು ನಿರ್ವಹಿಸಲಿದ್ದು, ಹುಸೇನ್ ಸಾಬ್ ಲಿಂಗಸುಗೂರು ಅವರಿಂದ ಭಕ್ತಿಗೀತೆಗಳ ಕಾರ್ಯಕ್ರಮಗಳು ನಡೆಯಲಿವೆ. ಮಮದಾಪುರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು, ಮಹಿಳೆಯರು, ಯುವಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಹೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಸರವಪ್ಪ ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಮೇಶ್, ಮಂದಕಲ್, ಸುಗ್ರೀವ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಮೊದಲನೇ ಪುಟದಿಂದ**

## ಸ್ನೇಹಿತನ ತಲೆ ಮೇಲೆ ಕಲ್ಲು ಎತ್ತಿಹಾಕಿ ಬರ್ಬರ ಹತ್ಯೆ

ಮೃತ ವಸೀಂ ಈ ಹಿಂದೆ ಕಳ್ಳತನ ಹಾಗೂ ಬೆದರಿಕೆ ಪ್ರಕರಣಗಳನ್ನು ಎದುರಿಸುತ್ತಿದ್ದ ಎಂಬ ಮಾಹಿತಿ ಲಭ್ಯವಾಗಿದೆ. ಇಂತಹ ಹಿನ್ನೆಲೆಯ ನಡುವೆ ಸ್ನೇಹಿತನಿಂದಲೇ ಕೊಲೆಯಾಗಿರುವ ಘಟನೆ ಸ್ಥಳೀಯರಲ್ಲಿ ಆತಂಕ ಮೂಡಿಸಿದೆ.

ಕೊಲೆ ನಡೆಸಿದ ಬಳಿಕ ಆರೋಪಿ ಜುಬೇರ್ ಪೊಲೀಸರಿಗೆ ಶರಣಾಗಿದ್ದು, ಘಟನೆಗೆ ಸಂಬಂಧಿಸಿದಂತೆ ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕೊಲೆಯ ಹಿಂದಿನ ನಿಖರ ಕಾರಣ ಹಾಗೂ ಘಟನೆ ನಡೆದ ಸಂದರ್ಭಗಳ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ರೈತರ ಜೋಳದ ಬಾಕಿ ₹109 ಕೋಟಿ ಡಿಬಿಟಿ ಮೂಲಕ ಪಾವತಿ: ತಹಶೀಲ್ದಾರ್ ಭೀಮರಾಯ

ಪಾವತಿಸುವ ಪ್ರಕ್ರಿಯೆ ಕೈಗೊಳ್ಳಲಾಗಿದೆ ಎಂದು ವಿವರಿಸಿದರು.

ವಿಶೇಷವಾಗಿ ಮಾನ್ವಿ ತಾಲೂಕಿನ ಹಿಂಗಾರು ಹಂಗಾಮಿನಲ್ಲಿ ಜೋಳ ಬೆಳೆದು ಸರ್ಕಾರದ ಖರೀದಿ ಕೇಂದ್ರಗಳಿಗೆ ಮಾರಾಟ ಮಾಡಿರುವ ರೈತರಿಗೆ ಒಟ್ಟು ₹109 ಕೋಟಿ ಬಾಕಿ ಹಣವನ್ನು ಡಿಬಿಟಿ ವ್ಯವಸ್ಥೆಯ ಮೂಲಕ ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಲಾಗುತ್ತಿದೆ. ಇದರಿಂದ ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ರೈತರಿಗೆ ಹಣ ತಲುಪಲು ಅನುಕೂಲವಾಗಲಿದೆ ಎಂದು ತಿಳಿಸಿದರು.

ಕೃಷಿ ಚಟುವಟಿಕೆಗಳಿಗೆ ಬಂಡವಾಳ ಹೂಡಿಕೆ ಮಾಡಿ ಬೆಳೆ ಬೆಳೆದ ರೈತರು, ತಾವು ಮಾರಾಟ ಮಾಡಿದ ಜೋಳದ ಹಣಕ್ಕಾಗಿ ಕಾಯುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರದ ಈ ಕ್ರಮವು ರೈತರಿಗೆ ಆರ್ಥಿಕ ನೆರವಾಗಲಿದೆ. ಬಾಕಿ ಹಣ ಪಾವತಿಯಿಂದ ಮುಂದಿನ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ಬೀಜ, ರಸಗೊಬ್ಬರ ಹಾಗೂ ಇತರೆ ಕೃಷಿ ಪರಿಕರಗಳ ಖರೀದಿಗೆ ಸಹಕಾರಿಯಾಗಲಿದೆ ಎಂದು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅಭಿಪ್ರಾಯಪಟ್ಟರು.

## ಎಸ್‌ಐಆರ್ ಪ್ರಕ್ರಿಯೆ ರದ್ದತಿಗೆ ಆಗ್ರಹಿಸಿ ಕಾಂಗ್ರೆಸ್ ಬೃಹತ್ ಪ್ರತಿಭಟನೆ

ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಪಡಿಸುವವರೆಗೂ ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಮಾತನಾಡಿ, ಭಾರತದ ಸಂವಿಧಾನವು ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಸಮಾನ ಮತದಾನದ ಹಕ್ಕನ್ನು ಕಲ್ಪಿಸಿದೆ. ಚುನಾವಣಾ ವ್ಯವಸ್ಥೆಯ ಮೇಲಿನ ಸಾರ್ವಜನಿಕ ವಿಶ್ವಾಸವನ್ನು ಉಳಿಸಿಕೊಳ್ಳುವುದು ಚುನಾವಣಾ ಆಯೋಗದ ಪ್ರಮುಖ ಜವಾಬ್ದಾರಿಯಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ ಪಾರದರ್ಶಕವಾಗಿ ನಡೆಯಬೇಕು. ಯಾವುದೇ ಅರ್ಹ ಮತದಾರ ತನ್ನ ಹಕ್ಕಿನಿಂದ ವಂಚಿತನಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮತದಾರರ ಪಟ್ಟಿಯಲ್ಲಿನ ಲೋಪದೋಷಗಳನ್ನು ಸರಿಪಡಿಸುವ ನೆಪದಲ್ಲಿ ಜನರ ಮತದಾನದ ಹಕ್ಕಿಗೆ ಧಕ್ಕೆಯಾಗಬಾರದು. ಚುನಾವಣಾ ಆಯೋಗದ ಕಾರ್ಯವೈಖರಿಯ ಬಗ್ಗೆ ಸಾರ್ವಜನಿಕರಲ್ಲಿ ಅನುಮಾನಗಳು ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಹಾಗೂ ಚುನಾವಣಾ ಆಯೋಗವು ಜನರ ಆತಂಕವನ್ನು ನಿವಾರಿಸಬೇಕು. ಪ್ರಜಾಪ್ರಭುತ್ವದ ಹಿತದೃಷ್ಟಿಯಿಂದ ಎಸ್‌ಐರ್ಆ ಪ್ರಕ್ರಿಯೆಯನ್ನು ಮರುಪರಿಶೀಲಿಸಬೇಕು ಎಂದು ಒತ್ತಾಯಿಸಿದರು. ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ್ ಮಾತನಾಡಿ, ಸಂವಿಧಾನವು ದೇಶದ ಪ್ರತಿಯೊಬ್ಬ ನಾಗರಿಕನಿಗೂ ನೀಡಿರುವ ಮತದಾನದ ಹಕ್ಕನ್ನು ಕಾಪಾಡುವುದು ಎಲ್ಲರ ಕರ್ತವ್ಯವಾಗಿದೆ. ಚುನಾವಣಾ ಪ್ರಕ್ರಿಯೆ ನ್ಯಾಯಸಮ್ಮತವಾಗಿ ಹಾಗೂ ಪಾರದರ್ಶಕವಾಗಿ ನಡೆಯಬೇಕಾದರೆ ಚುನಾವಣಾ ಆಯೋಗವು ಸ್ವತಂತ್ರವಾಗಿ ಕಾರ್ಯನಿರ್ವಹಿಸುವುದು ಅತ್ಯಗತ್ಯವಾಗಿದೆ ಎಂದು ಹೇಳಿದರು.

ಮತದಾರರ ಪಟ್ಟಿ ಪರಿಷ್ಕರಣೆಯ ಸಂದರ್ಭದಲ್ಲಿ ಸಾಮಾನ್ಯ ಜನರಿಗೆ ಅನಗತ್ಯ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಯಾವುದೇ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಕೈಬಿಡದಂತೆ ಮುನ್ನೆಚ್ಚರಿಕೆ ವಹಿಸಬೇಕು. ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉಳಿಸುವ ಹೋರಾಟದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಭಾಗವಹಿಸಬೇಕೆಂದು ಕರೆ ನೀಡಿದರು.

ಪ್ರತಿಭಟನಾಕಾರರು ಕೇಂದ್ರ ಸರ್ಕಾರದ ನೀತಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಎಸ್‌ಐರ್ಆ ಪ್ರಕ್ರಿಯೆಯನ್ನು ತಕ್ಷಣ ರದ್ದುಪಡಿಸುವಂತೆ ಆಗ್ರಹಿಸಿದರು. ಚುನಾವಣಾ ಆಯೋಗವು ಸಂವಿಧಾನಬದ್ಧವಾಗಿ, ರಾಜಕೀಯ ಪ್ರಭಾವದಿಂದ ಮುಕ್ತವಾಗಿ ಕಾರ್ಯನಿರ್ವಹಿಸಬೇಕು ಎಂಬ ಬೇಡಿಕೆಯನ್ನು ಮುಂದಿಟ್ಟರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ರುದ್ರಪ್ಪ ಅಂಗಡಿ, ಅಮರೇಗೌಡ ಅಂಚಿನಾಳ, ಜಯಣ್ಣ, ಶಾಲಾಮ್, ಶ್ರೀನಿವಾಸ್ ರೆಡ್ಡಿ, ಪವನ್ ಕುಮಾರ್, ಡಾ. ರಜಾಕ್ ಉಸ್ತಾದ್, ನರಸಿಂಹಲು ಮಡಗಿರಿ, ಶ್ರೀದೇವಿ ನಾಯಕ, ಪ್ರತಿಭಾ ರೆಡ್ಡಿ, ನಿರ್ಮಲ ಬೆಣ್ಣೆ, ಶಶಿಕಲಾ, ಸುರೇಖಾ, ಮರಿಸ್ವಾಮಿ ಸೇರಿದಂತೆ ಕಾಂಗ್ರೆಸ್ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಪ್ರಗತಿಪರ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

## ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ ಅಂಗವಾಗಿ ರಕ್ತದಾನ ಶಿಬಿರ: ಸಮಾಜಮುಖಿ ಕಾರ್ಯಕ್ಕೆ ಗಣ್ಯರ ಮೆಚ್ಚುಗೆ

ವಿವರಿಸಿದರು.

ಹಿಂದೆ ತೀವ್ರ ರಕ್ತಸ್ರಾವದಿಂದ ಬಳಲುತ್ತಿದ್ದ ಗರ್ಭಿಣಿಯೊಬ್ಬರಿಗೆ ತುರ್ತು ಚಿಕಿತ್ಸೆ ನೀಡುವ ಸಂದರ್ಭದಲ್ಲಿ ನಿರಂತರವಾಗಿ ರಕ್ತ ಪೂರೈಸಬೇಕಾದ ಪರಿಸ್ಥಿತಿ ಎದುರಾಗಿದ್ದನ್ನು ಸ್ಮರಿಸಿದ ಅವರು, ರಕ್ತದಾನದ ಮಹತ್ವವನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು ಎಂದರು.

ರಾಯಚೂರು ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ರಕ್ತ ಮತ್ತು ಅದರ ಘಟಕಗಳ ಲಭ್ಯತೆಯನ್ನು ಹೆಚ್ಚಿಸುವ ಅಗತ್ಯವಿದೆ. ರೋಟರಿ ಸಂಸ್ಥೆಯಂತಹ ಸೇವಾ ಸಂಘಟನೆಗಳು ನಿರಂತರವಾಗಿ ರಕ್ತದಾನ ಶಿಬಿರಗಳನ್ನು ಆಯೋಜಿಸುವ ಮೂಲಕ ಆರೋಗ್ಯ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡುತ್ತಿವೆ. ಪತ್ರಕರ್ತರು ತಮ್ಮ ವೃತ್ತಿ ಜವಾಬ್ದಾರಿಯ ಜೊತೆಗೆ ಇಂತಹ ಮಾನವೀಯ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವುದು ಸಂತಸದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರೋಟರಿ ಜಿಲ್ಲಾ ಗವರ್ನರ್ ತ್ರಿವಿಕ್ರಮ್ ಜೋಶಿ ಮಾತನಾಡಿ, ರಕ್ತದ ಬೇಡಿಕೆಗೆ ಅನುಗುಣವಾಗಿ ದಾನಿಗಳ ಸಂಖ್ಯೆ ಹೆಚ್ಚಾಗಬೇಕಿದೆ. ಕೆಲವೊಮ್ಮೆ ಸ್ಥಳೀಯವಾಗಿ ಅಗತ್ಯ ಪ್ರಮಾಣದ ರಕ್ತ ಲಭ್ಯವಾಗದ ಕಾರಣ ಹೊಸಪೇಟೆ ಹಾಗೂ ಬೆಂಗಳೂರಿನಂತಹ ನಗರಗಳಿಂದ ರಕ್ತ ಸಂಗ್ರಹಿಸಬೇಕಾದ ಪರಿಸ್ಥಿತಿ ಎದುರಾಗುತ್ತದೆ. ಈ ಸಮಸ್ಯೆ ನಿವಾರಣೆಗೆ ಸಾರ್ವಜನಿಕರಲ್ಲಿ ರಕ್ತದಾನದ ಕುರಿತು ಹೆಚ್ಚಿನ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದರು.

ರಕ್ತದಾನ ಮಾಡಲು ಜನರು ಸ್ವಯಂಪ್ರೇರಿತರಾಗಿ ಮುಂದೆ ಬರಬೇಕು. ಒಬ್ಬ ವ್ಯಕ್ತಿಯ ರಕ್ತದಾನದಿಂದ ವಿವಿಧ ರಕ್ತಘಟಕಗಳ ಮೂಲಕ ಒಂದಕ್ಕಿಂತ ಹೆಚ್ಚು ರೋಗಿಗಳಿಗೆ ನೆರವಾಗುವ ಅವಕಾಶವಿದೆ. ರಿಪೋರ್ಟರ್ಸ್ ಗಿಲ್ಡ್ ತನ್ನ ಬೆಳ್ಳಿ ಮಹೋತ್ಸವದ ಅಂಗವಾಗಿ ಇಂತಹ ಉಪಯುಕ್ತ ಕಾರ್ಯಕ್ರಮ ಆಯೋಜಿಸಿರುವುದು ಅಭಿನಂದನೀಯ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ್ ಜಾಗಟಗಲ್ ಮಾತನಾಡಿ, ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಸ್ಥಾಪನೆಯಾಗಿ 25 ವರ್ಷಗಳು ಪೂರ್ಣಗೊಂಡಿರುವುದು ಹೆಮ್ಮೆಯ ಸಂಗತಿ. ಈ ಸುದೀರ್ಘ ಅವಧಿಯಲ್ಲಿ ಪತ್ರಕರ್ತರ ಹಿತಾಸಕ್ತಿಯ ಜೊತೆಗೆ ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯವನ್ನು ಸಂಸ್ಥೆ ಮಾಡುತ್ತಾ ಬಂದಿದೆ. ಬೆಳ್ಳಿ ಮಹೋತ್ಸವವನ್ನು ಕೇವಲ ಮನರಂಜನೆ ಹಾಗೂ ಅದ್ಧೂರಿ ಸಮಾರಂಭಗಳಿಗೆ ಸೀಮಿತಗೊಳಿಸದೆ, ಜನಸಾಮಾನ್ಯರಿಗೆ ಪ್ರಯೋಜನವಾಗುವ ಸೇವಾ ಚಟುವಟಿಕೆಗಳ ಮೂಲಕ ಆಚರಿಸಲು ನಿರ್ಧರಿಸಲಾಗಿದೆ ಎಂದರು.

ರಿಪೋರ್ಟರ್ಸ್ ಗಿಲ್ಡ್ ಕೇವಲ ಪತ್ರಕರ್ತರಿಗೆ ಸಂಬಂಧಿಸಿದ ಸಂಘಟನೆಯಲ್ಲ, ಸಾರ್ವಜನಿಕರೊಂದಿಗೆ ನಿಕಟ ಸಂಪರ್ಕ ಹೊಂದಿರುವ ಸಂಸ್ಥೆಯಾಗಿದೆ. ಆದ್ದರಿಂದ ಬೆಳ್ಳಿ ಮಹೋತ್ಸವದ ಯಶಸ್ಸಿಗೆ ಜಿಲ್ಲೆಯ ವಿವಿಧ ಸಂಘಟನೆಗಳು, ಗಣ್ಯರು ಹಾಗೂ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಅಕ್ಟೋಬರ್ 30ರಂದು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವದ ಮುಖ್ಯ ಸಮಾರಂಭ ಆಯೋಜಿಸಲಾಗಿದ್ದು, ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದ ಅವರು, ಕಾರ್ಯಕ್ರಮದಲ್ಲಿ ಎಲ್ಲರೂ ಪಾಲ್ಗೊಂಡು ಬೆಳ್ಳಿ ಮಹೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಕೋರಿದರು.

ರಕ್ತದಾನದಲ್ಲಿ ಪತ್ರಕರ್ತರ ಸಕ್ರಿಯ ಪಾಲ್ಗೊಳ್ಳುವಿಕೆ: ಶಿಬಿರದಲ್ಲಿ ತುಂಗ ಬಿಂಬ ಕನ್ನಡ ದಿನಪತ್ರಿಕೆಯ ಸಂಪಾದಕ ಗುರುರಾಜ ಕೆ., ರಾಯಚೂರು ಧ್ವನಿ ಪತ್ರಿಕೆಯ ಸಂಪಾದಕ ಲಕ್ಷ್ಮಣ ಕಪಗಲ್, ರಮೇಶ್ ಗೌಡ, ಎಚ್ಚರಿಕೆ ಗಂಟೆ ಪತ್ರಿಕೆಯ ಸಂಪಾದಕ ರವಿದಾಸ್ ಸೇರಿದಂತೆ ವಿವಿಧ ಪತ್ರಿಕೆಗಳ ಸಂಪಾದಕರು, ವರದಿಗಾರರು ಹಾಗೂ ಪತ್ರಿಕಾ ವೃತ್ತಿಯಲ್ಲಿ ತೊಡಗಿಸಿಕೊಂಡಿರುವ ಅನೇಕರು ಸ್ವಯಂಪ್ರೇರಣೆಯಿಂದ ರಕ್ತದಾನ ಮಾಡಿದರು. ವೃತ್ತಿಯ ಮೂಲಕ ಸಮಾಜದ ಸಮಸ್ಯೆಗಳನ್ನು ಬೆಳಕಿಗೆ ತರುವ ಪತ್ರಕರ್ತರು ರಕ್ತದಾನದಲ್ಲಿಯೂ ಭಾಗವಹಿಸುವ ಮೂಲಕ ಸಾಮಾಜಿಕ ಕಳಕಳಿಯನ್ನು ಮೆರೆದರು.

ಈ ಸಂದರ್ಭದಲ್ಲಿ ರೋಟರಿ ಅಧ್ಯಕ್ಷ ರಾಮರಾವ್ ಗಣೇಕಲ್, ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದನಗೌಡ ಕುಕನೂರು, ಸಂಪಾದಕರ ಸಂಘದ ಅಧ್ಯಕ್ಷ ಚನ್ನಬಸವ ಬಾಗಲವಾಡ, ವೆಂಕಟೇಶ ಹೂಗಾರ ಸೇರಿದಂತೆ ಹಿರಿಯ ಹಾಗೂ ಕಿರಿಯ ಪತ್ರಕರ್ತರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

# ಶಾವಂತಗೇರಾ‌ಹೇಮನಾಳ ಗ್ರಾಪಂ ಚುನಾವಣೆ ನಡೆಸಲು ಆಗ್ರಹ; ಜಿಲ್ಲಾಡಳಿತಕ್ಕೆ 15 ದಿನಗಳ ಗಡುವು



ರಾಯಚೂರು: ದೇವದುರ್ಗ ತಾಲೂಕಿನ ಶಾವಂತಗೇರಾ ಮತ್ತು ಹೇಮನಾಳ ಗ್ರಾಮ ಪಂಚಾಯತಿಗಳಿಗೆ ಸುಮಾರು 11 ವರ್ಷಗಳಿಂದ ಚುನಾವಣೆ ನಡೆಯದಿರುವುದರಿಂದ ಸ್ಥಳೀಯ ಆಡಳಿತ ವ್ಯವಸ್ಥೆ ದುರ್ಬಲಗೊಂಡಿದ್ದು, ಗ್ರಾಮಗಳ ಅಭಿವೃದ್ಧಿ ಹಾಗೂ ಸಾರ್ವಜನಿಕರಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವಲ್ಲಿ ತೊಂದರೆಯಾಗುತ್ತಿದೆ. ಆದ್ದರಿಂದ ಚುನಾವಣೆಗೆ ಇರುವ ಕಾನೂನು ಅಡೆತಡೆಗಳನ್ನು ನಿವಾರಿಸಿ ಶೀಘ್ರ ಚುನಾವಣೆ ನಡೆಸಬೇಕು ಎಂದು ಶಾವಂತಗೇರಾ ಮತ್ತು ಹೇಮನಾಳ ಗ್ರಾಮ ಪಂಚಾಯತಿ ನಾಗರಿಕ ಹೋರಾಟ ಸಮಿತಿ ಆಗ್ರಹಿಸಿದೆ.

ಈ ಕುರಿತು ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮಸ್ಥರು ಪ್ರತಿಭಟನೆ ನಡೆಸಿ ರಾಯಚೂರಿನ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಶಾವಂತಗೇರಾ ಮತ್ತು ಹೇಮನಾಳ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಸಂಬಂಧಿಸಿದ ಗೊಂದಲ ಹಾಗೂ ನ್ಯಾಯಾಲಯದಲ್ಲಿರುವ ಪ್ರಕರಣದ ಹಿನ್ನೆಲೆಯಲ್ಲಿ ಹಲವು ವರ್ಷಗಳಿಂದ ಚುನಾವಣೆ ನಡೆದಿಲ್ಲ ಎಂದು ಸಮಿತಿ ತಿಳಿಸಿದೆ. 2022ರಲ್ಲಿ ಕಂದಾಯ ಪ್ರಾದೇಶಿಕ ಆಯುಕ್ತರು ಯಥಾಸ್ಥಿತಿ ಕಾಪಾಡಿಕೊಂಡು ಚುನಾವಣೆ ನಡೆಸುವಂತೆ ಆದೇಶಿಸಿದ್ದರೂ, ನಂತರ ನ್ಯಾಯಾಲಯದಿಂದ ತಡೆಯಾಜ್ಞೆ ಬಂದ ಕಾರಣ ಚುನಾವಣೆ ಸ್ಥಗಿತಗೊಂಡಿದೆ. ತಡೆಯಾಜ್ಞೆ ತೆರವುಗೊಳಿಸಿ ಚುನಾವಣೆ ನಡೆಸಲು ಅಗತ್ಯ ಕಾನೂನು ಕ್ರಮ ಕೈಗೊಳ್ಳುವಲ್ಲಿ ಜಿಲ್ಲಾಡಳಿತ ವಿಳಂಬ ಮಾಡುತ್ತಿದೆ ಎಂದು ಸಮಿತಿ ಆರೋಪಿಸಿದೆ.

ಚುನಾಯಿತ ಅಧ್ಯಕ್ಷರು ಮತ್ತು ಸದಸ್ಯರು ಇಲ್ಲದಿರುವುದರಿಂದ ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ವ್ಯವಸ್ಥೆ ಇಲ್ಲದಂತಾಗಿದೆ. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಕಚೇರಿಗೆ ನಿಯಮಿತವಾಗಿ ಹಾಜರಾಗದಿರುವ ಕುರಿತು ದೂರುಗಳಿದ್ದು, ಇ-ಸ್ವತ್ತು, ಆಸ್ತಿ ನೋಂದಣಿ, ಖಾತೆ ಬದಲಾವಣೆ, ವಾಸಸ್ಥಳ ಪ್ರಮಾಣಪತ್ರ ಸೇರಿದಂತೆ ವಿವಿಧ ದಾಖಲೆಗಳನ್ನು ಪಡೆಯಲು ಗ್ರಾಮಸ್ಥರು ಪರದಾಡುತ್ತಿದ್ದಾರೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಗ್ರಾಮ ಪಂಚಾಯತಿ ಮಟ್ಟದಲ್ಲಿ ಚುನಾಯಿತ ಆಡಳಿತ ಇಲ್ಲದಿರುವುದರಿಂದ ಕೃಷಿ ಹೊಂಡ, ಚೆಕ್ ಡ್ಯಾಂ, ತೋಟಗಾರಿಕೆ ಯೋಜನೆಗಳು, ಶೌಚಾಲಯ, ಕುಡಿಯುವ ನೀರು ಸೇರಿದಂತೆ ವಿವಿಧ ಮೂಲಭೂತ ಸೌಲಭ್ಯಗಳ ಅನುಷ್ಠಾನಕ್ಕೂ ತೊಂದರೆಯಾಗುತ್ತಿದೆ. ಗ್ರಾಮಗಳ ಸಮಗ್ರ ಅಭಿವೃದ್ಧಿಗಾಗಿ ಚುನಾಯಿತ ಸ್ಥಳೀಯ ಆಡಳಿತ ಅತ್ಯಗತ್ಯ ಎಂದು ಸಮಿತಿ ಒತ್ತಾಯಿಸಿದೆ.

ನ್ಯಾಯಾಲಯದಲ್ಲಿರುವ ತಡೆಯಾಜ್ಞೆ ತೆರವುಗೊಳಿಸಲು ಜಿಲ್ಲಾಡಳಿತ ಕಾನೂನುಬದ್ಧ ಕ್ರಮ ಕೈಗೊಂಡು, ಮುಂಬರುವ ಗ್ರಾಮ ಪಂಚಾಯತಿ ಚುನಾವಣೆಯಲ್ಲಿ ಶಾವಂತಗೇರಾ ಮತ್ತು ಹೇಮನಾಳ ಗ್ರಾಮ ಪಂಚಾಯತಿಗಳಿಗೂ ಚುನಾವಣೆ ನಡೆಯುವಂತೆ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಲಾಗಿದೆ.

ಮನವಿ ಸಲ್ಲಿಸಿದ 15 ದಿನಗಳೊಳಗೆ ಜಿಲ್ಲಾಡಳಿತ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಎರಡೂ ಗ್ರಾಮ ಪಂಚಾಯತಿ ಕಚೇರಿಗಳಿಗೆ ಬೀಗಮುದ್ರೆ ಹಾಕುವ ಹೋರಾಟ ನಡೆಸಲಾಗುವುದು. ಅಲ್ಲದೆ, ಮುಂದಿನ ಜಿಲ್ಲಾ ಪಂಚಾಯತಿ ಮತ್ತು ತಾಲೂಕು ಪಂಚಾಯತಿ ಚುನಾವಣೆಗಳನ್ನು ಬಹಿಷ್ಕರಿಸುವ ಕುರಿತು ತೀರ್ಮಾನ ಕೈಗೊಳ್ಳಲಾಗುವುದು ಎಂದು ನಾಗರಿಕ ಹೋರಾಟ ಸಮಿತಿ ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ರಾಚಣ್ಣ ನಾಯಕ ಕೋಳೂರು, ರಾಜಪ್ಪಗೌಡ ಬಸವಂತಪೂರು, ವಿಜಯ ಭಂಡಾರಿ ಶಾವಂತಗೇರಾ, ಶರಣಪ್ಪ ಹಿರೇರಾಯಕುಂಪಿ, ಮೂರ್ತಿ ನಾಯಕ ಹೇಮನಾಳ, ಶಾಂತಕುಮಾರ ಹೊನ್ನಟಗಿ, ಕೆ. ಯಲ್ಲಪ್ಪ ಬೊಮ್ಮನಾಳ, ರಂಗಪ್ಪ ಹೇಮನಾಳ, ಪ್ರಭಾಕರ್ ಪಾಟೀಲ್ ಇಂಗಳದಾಳ, ಸುರೇಶಗೌಡ ಹಂಚಿನಾಳ, ಉಸ್ಮಾನ್ ಬಾಬ್ ಖಾನಪೂರು, ಹಂಪಣ್ಣ ಅಪ್ರಾಲ್ ಸೇರಿದಂತೆ ಪಂಚಾಯತಿ ವ್ಯಾಪ್ತಿಯ ವಿವಿಧ ಗ್ರಾಮಗಳ ರೈತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಕರ್ನಾಟಕ ಮಾದಿಗ ಮಹಾಸಭಾ ರಾಯಚೂರು ನಗರ ಘಟಕಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ



ರಾಯಚೂರು, ಅ.9: ಕರ್ನಾಟಕ ಮಾದಿಗ (ಮಾದರ) ಮಹಾಸಭಾದ ರಾಯಚೂರು ನಗರ ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ಸಭೆಯ ಸರ್ವಾನುಮತದ ನಿರ್ಣಯದ ಮೂಲಕ ಆಯ್ಕೆ ಮಾಡಲಾಗಿದ್ದು, ಕೆ.ಪಿ. ಅನಿಲ್ ಕುಮಾರ್ ಅವರನ್ನು ನಗರ ಘಟಕದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ಸಮೀಪವಿರುವ ನೃಪತುಂಗ ಹೋಟೆಲ್ ಸಭಾಂಗಣದಲ್ಲಿ ಅಕ್ಟೋಬರ್ 8ರಂದು ಕರ್ನಾಟಕ ಮಾದಿಗ (ಮಾದರ) ಮಹಾಸಭಾದ ಜಿಲ್ಲಾ ಸಮಿತಿ ವತಿಯಿಂದ ಆಯೋಜಿಸಿದ್ದ ಸಭೆಯಲ್ಲಿ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾಸಭಾದ ಜಿಲ್ಲಾಧ್ಯಕ್ಷ ಎಂ. ವಿರೂಪಾಕ್ಷಿ, ಮಾದಿಗ ಸಮುದಾಯದ ಶೈಕ್ಷಣಿಕ, ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಗೆ ಸಂಘಟಿತ ಪ್ರಯತ್ನಗಳು ಅಗತ್ಯವಾಗಿವೆ. ಕಳೆದ 30 ವರ್ಷಗಳಿಂದ ನಿರಂತರವಾಗಿ ನಡೆದ ಒಳಮೀಸಲಾತಿ ಹೋರಾಟದ ಫಲವನ್ನು ಮುಂದಿನ ಪೀಳಿಗೆಯ ಭವಿಷ್ಯ ರೂಪಿಸಲು ಸಮರ್ಪಕವಾಗಿ ಬಳಸಿಕೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ಸಮುದಾಯದ ಪ್ರತಿಯೊಬ್ಬರೂ ಶಿಕ್ಷಣ, ಉದ್ಯೋಗ ಹಾಗೂ ಸಾಮಾಜಿಕ ಪ್ರಗತಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು.

ಒಳಮೀಸಲಾತಿಯ ಸೌಲಭ್ಯಗಳನ್ನು ಸಮುದಾಯದ ಅರ್ಹ ಫಲಾನುಭವಿಗಳಿಗೆ ತಲುಪಿಸುವುದರ ಜೊತೆಗೆ ಯುವಜನರನ್ನು ಸ್ಪರ್ಧಾತ್ಮಕ ಜಗತ್ತಿಗೆ ಸಜ್ಜುಗೊಳಿಸುವುದು ಮಹಾಸಭಾದ ಪ್ರಮುಖ ಉದ್ದೇಶವಾಗಿದೆ. ಇದಕ್ಕಾಗಿ ಶಿಕ್ಷಣ ಮತ್ತು ಕೌಶಲಾಭಿವೃದ್ಧಿ ತರಬೇತಿ ಕೇಂದ್ರ, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಹಾಗೂ ಅಧ್ಯಯನ ಕೇಂದ್ರ, ವಿದ್ಯಾರ್ಥಿಗಳು ಮತ್ತು ಯುವಜನರಿಗೆ ಗ್ರಂಥಾಲಯ ಹಾಗೂ ವಾಚನಾಲಯ ಸ್ಥಾಪಿಸಲು ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಮಾದಿಗ ಸಮುದಾಯದ ಇತಿಹಾಸ, ಕಲೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ವಸ್ತುಸಂಗ್ರಹಾಲಯ ಸ್ಥಾಪಿಸುವುದು, ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ವಸತಿ ಮತ್ತು ಶೈಕ್ಷಣಿಕ ನೆರವು ಒದಗಿಸುವುದು, ಉದ್ಯೋಗ ಹಾಗೂ ಸ್ವಯಂ ಉದ್ಯೋಗ ಅವಕಾಶಗಳ ಕುರಿತು ಮಾರ್ಗದರ್ಶನ ನೀಡುವುದು ಮಹಾಸಭಾದ ಮುಂದಿನ ಗುರಿಗಳಾಗಿವೆ ಎಂದರು.

ಇದರೊಂದಿಗೆ ಸರ್ಕಾರಿ ಯೋಜನೆಗಳ ಬಗ್ಗೆ ಅರಿವು ಮೂಡಿಸುವುದು, ಮದ್ಯವ್ಯಸನ ಮುಕ್ತಿ, ಆರೋಗ್ಯ, ಶಿಕ್ಷಣ ಮತ್ತು ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಹಾಗೂ ಸಮುದಾಯದ ಸಭೆ, ಸಮಾವೇಶ, ತರಬೇತಿ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಉದ್ದೇಶಿಸಲಾಗಿದೆ. ಈ ಎಲ್ಲ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಮುದಾಯದ ಪ್ರತಿಯೊಬ್ಬರೂ ಮಹಾಸಭೆಯ ಸದಸ್ಯತ್ವ ಪಡೆದು ಸಂಘಟನೆಯನ್ನು ಬಲಪಡಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ರಾಯಚೂರು ನಗರ ಘಟಕದ ಅಧ್ಯಕ್ಷರಾಗಿ ಕೆ.ಪಿ. ಅನಿಲ್ ಕುಮ್ಾರ್ ಉಪಾಧ್ಯಕ್ಷರಾಗಿ ರಾಜು, ಕಾರ್ಯದರ್ಶಿಯಾಗಿ ಚಂದ್ರಶೇಖರ್ ಯಕ್ಲಾಸಪೂರ ಹಾಗೂ ಖಜಾಂಚಿಯಾಗಿ ಪಿ. ಅಮರೇಶ ಅವರನ್ನು ಆಯ್ಕೆ ಮಾಡಲಾಯಿತು.

ಕಾರ್ಯಕಾರಿ ಸಮಿತಿ ಸದಸ್ಯರಾಗಿ ಈರಣ್ಣ ಭಂಡಾರಿ, ಭೀಮಣ್ಣ ಮಂಚಾಲ, ತಿಮ್ಮಪ್ಪ ಫಿರಂಗಿ ರಾಂಪೂರ, ನರಸರೆಡ್ಡಿ ಯರಮರಸ್ ಹಾಗೂ ಭೀಮಣ್ಣ ಹೊಸೂರು ಅವರನ್ನು ಆಯ್ಕೆ ಮಾಡಲಾಯಿತು.

ಗೌರವ ಸಲಹೆಗಾರರಾಗಿ ವೆಂಕಟಸ್ವಾಮಿ ಆರ್. ತಿಮ್ಮಯ್ಯ, ಸುಧಾಮ, ರಾಜಶ್ರೀನಿವಾಸ, ಸುಂದರರಾಜ ಹಾಗೂ ಸುಭಾಷ ಅಸ್ಕಿಹಾಳ ಅವರನ್ನು ನೇಮಿಸಲಾಯಿತು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ, ಸಮಾಜದ ಹಿರಿಯ ಮುಖಂಡರಾದ ಜಯಣ್ಣ, ಎಚ್.ಬಿ. ಮುರಾರಿ, ಕಿರಿಲಿಂಗಪ್ಪ, ನರಸಿಂಹಲು ಮಾಡಗಿರಿ, ರವೀಂದ್ರ ಜಲ್ದಾರ್ ಪಿ. ಯಲ್ಲಪ್ಪ, ತಿಮ್ಮಪ್ಪ ಫಿರಂಗಿ, ಭೀಮಣ್ಣ ಮಂಚಾಲಿ, ಈರಣ್ಣ ಭಂಡಾರಿ, ಯಮುನಪ್ಪ ಗಿರಿಜಾಲಿ, ಆಂಜನೇಯ ಕುರುಬುದೊಡ್ಡಿ, ನಾಗರಾಜ ಖಾನಾಪುರ, ಜೆ. ಅಂಜನ್ ಕುಮ್ಾರ್ ಜನಾರ್ಧನ್ ಅರಳಿಬೆಂಚಿ, ಚಂದ್ರು ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಾಮಾಜಿಕ ಹೋರಾಟಗಾರರು, ನೌಕರರು, ನಿವೃತ್ತ ನೌಕರರು ಹಾಗೂ ಸಮುದಾಯದ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಸಭೆಯಲ್ಲಿ ಸಮುದಾಯದ ಸಂಘಟನೆಯನ್ನು ನಗರ ಮಟ್ಟದಿಂದ ಮತ್ತಷ್ಟು ಬಲಪಡಿಸುವುದು ಹಾಗೂ ಶಿಕ್ಷಣ, ಉದ್ಯೋಗ ಮತ್ತು ಸಾಮಾಜಿಕ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸುವ ಕುರಿತು ಚರ್ಚಿಸಲಾಯಿತು.

# ತಂಜಿಮುಲ್ ಮುಸ್ಲಿಮೀನ್ ಕಮಿಟಿ ನೋಂದಣಿ ರದ್ದು ವಿಚಾರಣೆಗೆ ವಿಶೇಷ ಅಧಿಕಾರಿ ನೇಮಕ



ಲಿಂಗಸುಗೂರು: ತಂಜಿಮುಲ್ ಮುಸ್ಲಿಮೀನ್ ಕಮಿಟಿಯ ನೋಂದಣಿ ರದ್ದುಪಡಿಸುವಂತೆ ಸಲ್ಲಿಸಿರುವ ದೂರಿನ ವಿಚಾರಣೆಗೆ ಲಿಂಗಸುಗೂರು ಹಿರಿಯ ನಿರೀಕ್ಷಕ ಗಂಗಪ್ಪ ಅವರನ್ನು ವಿಶೇಷ ಅಧಿಕಾರಿಯಾಗಿ ರಾಯಚೂರು ಸಹಕಾರ ಸಂಘಗಳ ಉಪನಿಬಂಧಕರು ನೇಮಕ ಮಾಡಿದ್ದಾರೆ.

ಅಂಜುಮನ್ ತಾಲೂಕು ಗೌರವಾಧ್ಯಕ್ಷ ಅನ್ಸರುದ್ದೀನ್ ಹಾಗೂ ಅಧ್ಯಕ್ಷ ಹುಸೇನ್ ಬಾಷಾ ಅವರು ಕಮಿಟಿಯ ನೋಂದಣಿ ರದ್ದುಗೊಳಿಸುವಂತೆ ದೂರು ಸಲ್ಲಿಸಿದ್ದರು. ಈ ಹಿಂದೆ ವಿಚಾರಣೆ ನಡೆಸುವ ಜವಾಬ್ದಾರಿಯನ್ನು ಸಹಾಯಕ ನಿಬಂಧಕರಿಗೆ ನೀಡಲಾಗಿತ್ತು. ಆದರೆ, ಸಂಬಂಧಿಕರು ಪ್ರಕರಣದಲ್ಲಿ ಇರುವ ಹಿನ್ನೆಲೆಯಲ್ಲಿ ನಿಷ್ಪಕ್ಷಪಾತ ಹಾಗೂ ಪಾರದರ್ಶಕ ವಿಚಾರಣೆ ನಡೆಸಲು ತೊಂದರೆಯಾಗಬಹುದು ಎಂದು ಅವರು ಬೇರೆ ಅಧಿಕಾರಿಯನ್ನು ನೇಮಿಸುವಂತೆ ಮನವಿ ಮಾಡಿದ್ದರು ಎನ್ನಲಾಗಿದೆ.

ಈ ಹಿನ್ನೆಲೆಯಲ್ಲಿ ಗಂಗಪ್ಪ ಅವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಲಾಗಿದ್ದು, ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಸಂಬಂಧಪಟ್ಟ ದಾಖಲೆಗಳು, ಬೈಲಾ ಹಾಗೂ ಇತರ ಅಂಶಗಳನ್ನು ಪರಿಶೀಲಿಸಿ ಏಳು ದಿನಗಳೊಳಗೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ.

ಈ ಕುರಿತು ಮಾತನಾಡಿದ ಅನ್ಸರುದ್ದೀನ್, ವಿಚಾರಣೆ ನಿಷ್ಪಕ್ಷಪಾತವಾಗಿ ನಡೆಯಬೇಕು. ನಿಯಮ ಉಲ್ಲಂಘನೆ ನಡೆದಿರುವುದು ದೃಢಪಟ್ಟಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕಮಿಟಿ ಸದಸ್ಯರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ಯರಮರಸ್‌ನ ಪೂರ್ಣಿಮಾ ಢಾಬಾ ಮೇಲೆ ಅಬಕಾರಿ ದಾಳಿ; ಮದ್ಯ ವಶ, ಪ್ರಕರಣ ದಾಖಲು




ರಾಯಚೂರು: ಅಬಕಾರಿ ಇಲಾಖೆಯ ಅಧಿಕಾರಿಗಳು ನಗರದ ಯರಮರಸ್ ಪ್ರದೇಶದಲ್ಲಿರುವ ಪೂರ್ಣಿಮಾ ಢಾಬಾ ಮೇಲೆ ದಾಳಿ ನಡೆಸಿ, ಅಕ್ರಮವಾಗಿ ಸಂಗ್ರಹಿಸಿದ್ದ ಮದ್ಯವನ್ನು ವಶಪಡಿಸಿಕೊಂಡು ಒಬ್ಬರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ಅಬಕಾರಿ ಅಪರ ಆಯುಕ್ತರು (ಜಾರಿ ಮತ್ತು ಅಪರಾಧ), ಕೇಂದ್ರ ಕಚೇರಿ ಬೆಳಗಾವಿ ಅವರ ಆದೇಶದಂತೆ, ಕಲಬುರಗಿ ವಿಭಾಗದ ಅಬಕಾರಿ ಜಂಟಿ ಆಯುಕ್ತರು ಹಾಗೂ ರಾಯಚೂರು ಜಿಲ್ಲಾ ಅಬಕಾರಿ ಉಪ ಆಯುಕ್ತರ ನಿರ್ದೇಶನದಲ್ಲಿ, ರಾಯಚೂರು ಉಪ ವಿಭಾಗದ ಅಬಕಾರಿ ಉಪ ಅಧೀಕ್ಷಕರ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಅ.8ರಂದು ರಾತ್ರಿ ಸುಮಾರು 9 ಗಂಟೆಗೆ ರಾಯಚೂರು ವಲಯ ಕಚೇರಿಯ ಸಿಬ್ಬಂದಿ ಗಸ್ತಿನಲ್ಲಿದ್ದ ವೇಳೆ ದೊರೆತ ಖಚಿತ ಮಾಹಿತಿಯ ಮೇರೆಗೆ ಯರಮರಸ್‌ನ ಪೂರ್ಣಿಮಾ ಢಾಬಾ ಮೇಲೆ ದಾಳಿ ನಡೆಸಿದರು.

ದಾಳಿ ವೇಳೆ ಜಂಬಲದಿನ್ನಿ ಗ್ರಾಮದ ವಿಜಯ್ ತಂದೆ ನಾಗೇಂದ್ರಗೌಡ ಅವರ ಬಳಿ ಸುಮಾರು 4.320 ಲೀಟರ್ ಮದ್ಯ ಹಾಗೂ 7.8 ಲೀಟರ್ ಬಿಯರ್ ಪತ್ತೆಯಾಗಿದೆ ಎಂದು ಅಬಕಾರಿ ಇಲಾಖೆ ತಿಳಿಸಿದೆ.

ಪತ್ತೆಯಾದ ಮದ್ಯವನ್ನು ವಶಕ್ಕೆ ಪಡೆದು ಸ್ಥಳದಲ್ಲಿಯೇ ಪಂಚನಾಮೆ ನಡೆಸಲಾಗಿದ್ದು, ಆರೋಪಿತನ ವಿರುದ್ಧ ರಾಯಚೂರು ವಲಯದ ಅಬಕಾರಿ ನಿರೀಕ್ಷಕರು ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಂಡಿದ್ದಾರೆ.

# ತೃತೀಯ ಅನಿವಾಸಿ ಕನ್ನಡಿಗರ ಸಮ್ಮೇಳನ ಯಶಸ್ವಿ: ಕನ್ನಡ ನಾಡಿನ ಸಂಸ್ಕೃತಿ, ಸಾಹಿತ್ಯದ ವೈಭವ ಅನಾವರಣ



ಬೆಂಗಳೂರು, ಅ.9: ವಿಶ್ವದ ವಿವಿಧ ರಾಷ್ಟ್ರಗಳಲ್ಲಿ ನೆಲೆಸಿರುವ ಅನಿವಾಸಿ ಕನ್ನಡಿಗರು ಹಾಗೂ ಹೊರನಾಡಿನ ಕನ್ನಡಿಗರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಉದ್ದೇಶದಿಂದ ಹೃದಯವಾಹಿನಿ ಮಂಗಳೂರಿನ ಮಂಜುನಾಥ ಸಾಗರ ಮತ್ತು ತಂಡದ ವತಿಯಿಂದ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಗುರುವಾರ ಆಯೋಜಿಸಿದ್ದ ತೃತೀಯ ಅನಿವಾಸಿ ಮತ್ತು ಹೊರನಾಡಿನ ಕನ್ನಡಿಗರ ಸಮ್ಮೇಳನ ವೈವಿಧ್ಯಮಯ ಸಾಹಿತ್ಯಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಯಶಸ್ವಿಯಾಗಿ ನೆರವೇರಿತು.

ವಿಶ್ವದ ವಿವಿಧ ರಾಷ್ಟ್ರಗಳ ಕನ್ನಡ ಸಂಘಗಳ ಪದಾಧಿಕಾರಿಗಳು, ಸಾಹಿತಿಗಳು, ಕವಿಗಳು, ಕಲಾವಿದರು ಹಾಗೂ ಕನ್ನಡಾಭಿಮಾನಿಗಳು ಸಮ್ಮೇಳನದಲ್ಲಿ ಭಾಗವಹಿಸುವ ಮೂಲಕ ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಶ್ರೀಮಂತಿಕೆಯನ್ನು ಅನಾವರಣಗೊಳಿಸಿದರು. ವಿದೇಶಗಳಲ್ಲಿ ನೆಲೆಸಿದ್ದರೂ ಕನ್ನಡ ನಾಡಿನ ಭಾಷೆ ಹಾಗೂ ಸಂಸ್ಕೃತಿಯೊಂದಿಗೆ ನಿರಂತರ ಬಾಂಧವ್ಯ ಉಳಿಸಿಕೊಂಡಿರುವ ಅನಿವಾಸಿ ಕನ್ನಡಿಗರ ಉತ್ಸಾಹ ಸಮ್ಮೇಳನಕ್ಕೆ ವಿಶೇಷ ಮೆರುಗು ನೀಡಿತು.

ಸಮ್ಮೇಳನದ ಸರ್ವಾಧ್ಯಕ್ಷತೆಯನ್ನು ಕತಾರ್‌ನ ಸುಮಾ ಮಹೇಶ್ ವಹಿಸಿದ್ದರು. ಅಬುದಾಬಿಯ ಸರ್ವೋತ್ತಮ ಶೆಟ್ಟಿ, ಹಿರಿಯ ರಾಜಕಾರಣಿ ಬಸವರಾಜ ಹೊರಟ್ಟಿ, ಡಾ. ಆರತಿ ಕೃಷ್ಣ ಹಾಗೂ ವಿಧಾನ ಪರಿಷತ್ ಸದಸ್ಯ ಅಜೀತ್ ಬಂಗೇರ ಸೇರಿದಂತೆ ಗಣ್ಯರು ಜ್ಯೋತಿ ಪ್ರಜ್ವಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ನಟ ಮುಖ್ಯಮಂತ್ರಿ ಚಂದ್ರು, ಕಿಕ್ಕೇರಿ ಕೃಷ್ಣಮೂರ್ತಿ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಿ ಕನ್ನಡ ಭಾಷೆಯ ಬೆಳವಣಿಗೆ, ಹೊರನಾಡಿನಲ್ಲಿ ಕನ್ನಡದ ಉಳಿವು ಹಾಗೂ ಕನ್ನಡಿಗರ ಸಾಂಸ್ಕೃತಿಕ ಒಗ್ಗಟ್ಟಿನ ಮಹತ್ವದ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಸಮ್ಮೇಳನದ ಅಂಗವಾಗಿ ಡಾ. ಸಿ. ಸೋಮಶೇಖರ್ ಅವರ ಅಧ್ಯಕ್ಷತೆಯಲ್ಲಿ ಕೃತಿ ಬಿಡುಗಡೆ ಹಾಗೂ ಕವಿಗೋಷ್ಠಿ ಕಾರ್ಯಕ್ರಮ ನಡೆಯಿತು. ಡಾ. ಸತೀಶ್ ಕುಮಾರ್ ಹೊಸಮನಿ ಅವರ ಹಸಿರು ಹೊನ್ನು, ಶರಣರ ಕೃತಿ ಹಾಗೂ ಪ್ರಕಾಶ್ ಖಾಡೆ ಅವರ ಲಂಡನ್ ಪ್ರವಾಸ ಕಥನ ಕೃತಿಗಳನ್ನು ಡಾ. ಡಿ.ಎಸ್. ವೀರಯ್ಯ ಮತ್ತು ಡಾ. ಬಿ.ಆರ್. ಹಿರೇಮಠ್ ಲೋಕಾರ್ಪಣೆಗೊಳಿಸಿದರು.

ಕವಿಗೋಷ್ಠಿಯಲ್ಲಿ ಕೆನಡಾದ ರತ್ನ ಹಾಲಪ್ಪಗೌಡ ಅವರ ಚುಟುಕು ವಾಚನ, ಪ್ರೊ. ಎಂ.ಬಿ. ಕುದುರಿ ಹಾಗೂ ಶ್ರೀಮತಿ ಪುಷ್ಪಲತಾ ಕೆ.ಎಸ್. ಹೆಗಡೆ ಅವರ ಉತ್ತರವಿಲ್ಲದ ಪ್ರಶ್ನೆ ಶೀರ್ಷಿಕೆಯ ಕವನ ಪ್ರೇಕ್ಷಕರ ಗಮನ ಸೆಳೆಯಿತು. ಸಂಧ್ಯಾ ಭಟ್ ಮತ್ತು ಎಸ್.ವಿ. ಬಿರಾದರ್ ಅವರು ಸ್ವರಚಿತ ಕವನಗಳನ್ನು ವಾಚಿಸುವ ಮೂಲಕ ಸಾಹಿತ್ಯಾಸಕ್ತರ ಮೆಚ್ಚುಗೆಗೆ ಪಾತ್ರರಾದರು.

ಸಾಹಿತ್ಯಿಕ ಚಟುವಟಿಕೆಗಳೊಂದಿಗೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ಗೌರವಿಸುವ ಕಾರ್ಯಕ್ರಮವೂ ನಡೆಯಿತು. ಗೋಲ್ಡನ್ ಕಪಲ್ ಹಾಗೂ ನವ ಕರ್ನಾಟಕ ರತ್ನ ಗೌರವ ಪ್ರಶಸ್ತಿ ಪ್ರದಾನ, ಸಾಧಕರಿಗೆ ಅಭಿನಂದನೆ, ರಸಪ್ರಶ್ನೆ ಸ್ಪರ್ಧೆ ಮತ್ತು ಪ್ರತಿಭಾ ಪುರಸ್ಕಾರ ಸೇರಿದಂತೆ ಹಲವು ಕಾರ್ಯಕ್ರಮಗಳು ಸಮ್ಮೇಳನದ ವಿಶೇಷ ಆಕರ್ಷಣೆಯಾಗಿದ್ದವು.

ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿರುವ ಕಲಾವಿದರು ಪ್ರದರ್ಶಿಸಿದ ಶಾಸ್ತ್ರೀಯ ನೃತ್ಯ, ಗಾಯನ, ವಾದ್ಯಗೋಷ್ಠಿ, ಜನಪದ ನೃತ್ಯ, ಗೊಂಬೆಯಾಟ, ಕಿರುನಾಟಕ ಮತ್ತು ರಸಮಂಜರಿ ಕಾರ್ಯಕ್ರಮಗಳು ಕನ್ನಡ ನಾಡಿನ ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸಿದವು. ವಿಶೇಷವಾಗಿ ಜನಪದ ಕಲಾ ಪ್ರದರ್ಶನಗಳು ನಾಡಿನ ಮಣ್ಣಿನ ಸೊಗಡು ಹಾಗೂ ಗ್ರಾಮೀಣ ಸಂಸ್ಕೃತಿಯ ವೈಶಿಷ್ಟ್ಯವನ್ನು ಪರಿಚಯಿಸಿದವು.

ಕಾರ್ಯಕ್ರಮದ ನಿರೂಪಣೆಯನ್ನು ದೂರದರ್ಶನದ ವಾರ್ತಾ ವಾಚಕ ಡಾ. ನೂರ್ ಸಮದ್ ಅಚ್ಚುಕಟ್ಟಾಗಿ ನಿರ್ವಹಿಸಿದರು. ವಿವಿಧ ದೇಶಗಳಿಂದ ಆಗಮಿಸಿದ್ದ ಕನ್ನಡಿಗರ ಪರಸ್ಪರ ಭೇಟಿ, ವಿಚಾರ ವಿನಿಮಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಸಮ್ಮೇಳನವು ಕನ್ನಡಿಗರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ವೇದಿಕೆಯಾಯಿತು.

ಒಟ್ಟಾರೆ, ತೃತೀಯ ಅನಿವಾಸಿ ಮತ್ತು ಹೊರನಾಡಿನ ಕನ್ನಡಿಗರ ಸಮ್ಮೇಳನವು ಕನ್ನಡ ಭಾಷೆ, ಸಾಹಿತ್ಯ, ಕಲೆ ಮತ್ತು ಸಂಸ್ಕೃತಿಯ ಸಂಭ್ರಮಕ್ಕೆ ಸಾಕ್ಷಿಯಾಗುವುದರೊಂದಿಗೆ ವಿಶ್ವದಾದ್ಯಂತ ನೆಲೆಸಿರುವ ಕನ್ನಡಿಗರನ್ನು ಭಾವನಾತ್ಮಕವಾಗಿ ಬೆಸೆಯುವ ಮಹತ್ವದ ಕಾರ್ಯಕ್ರಮವಾಗಿ ಗಮನ ಸೆಳೆಯಿತು.

# ಅ.11ರಿಂದ ಬನ್ನಿ ಮಹಾಂಕಾಳಿ‌ಗಣೇಶ ದೇವಸ್ಥಾನದಲ್ಲಿ ನವರಾತ್ರೋತ್ಸವ



ಲಿಂಗಸುಗೂರು: ಪಟ್ಟಣದ 17ನೇ ವಾರ್ಡ್‌ನ ಲಕ್ಷ್ಮೀನಗರದಲ್ಲಿರುವ ಬನ್ನಿ ಮಹಾಂಕಾಳಿ ಹಾಗೂ ಗಣೇಶ ದೇವಸ್ಥಾನದಲ್ಲಿ ನವರಾತ್ರೋತ್ಸವ ಮತ್ತು ವಿಜಯದಶಮಿ ಹಬ್ಬದ ಅಂಗವಾಗಿ ಅ.11ರಿಂದ 19ರವರೆಗೆ ಒಂಬತ್ತು ದಿನಗಳ ಕಾಲ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಪ್ರತಿ ವರ್ಷದಂತೆ ಈ ವರ್ಷವೂ ನವರಾತ್ರೋತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಗುತ್ತಿದ್ದು, ಒಂಬತ್ತು ದಿನಗಳ ಕಾಲ ಮಹಿಳೆಯರು ಪ್ರತಿದಿನ ಬೆಳಗಿನ ಜಾವ ದೇವಸ್ಥಾನಕ್ಕೆ ಆಗಮಿಸಿ ದೇವಿಗೆ ವಿಶೇಷ ಪೂಜೆ ಸಲ್ಲಿಸಲಿದ್ದಾರೆ.

ನವರಾತ್ರಿಯ ಅಂಗವಾಗಿ ದೇವಸ್ಥಾನದಲ್ಲಿ ವಿಶೇಷ ಧಾರ್ಮಿಕ ವಿಧಿವಿಧಾನಗಳು ನಡೆಯಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಆಶೀರ್ವಾದ ಪಡೆಯುವಂತೆ ಬನ್ನಿ ಮಹಾಂಕಾಳಿ ಹಾಗೂ ಗಣೇಶ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಡಾ. ಚಂದ್ರಶೇಖರ ಪಾಟೀಲ್ (ಚಂಪಾ) ತಿಳಿಸಿದ್ದಾರೆ.

# ಅ. 12ರಿಂದ ಪುಸ್ತಕಗಳ ಪ್ರದರ್ಶನ

ರಾಯಚೂರು ಅ. 09 (ಕರ್ನಾಟಕ ವಾರ್ತೆ): 2023ನೇ ವರ್ಷದಲ್ಲಿ ಪ್ರಕಟಗೊಂಡು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾಗಿ ಸ್ವೀಕರಿಸಿದ ಪುಸ್ತಕಗಳನ್ನು ಆಯ್ಕೆ ಸಮಿತಿಯು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಆಯ್ಕೆಯಾದ ಮತ್ತು ಆಯ್ಕೆಯಾಗದ ಪುಸ್ತಕಗಳ ಪ್ರದರ್ಶನವನ್ನು ಡಾ.ವಿಷ್ಣುವರ್ಧನ ಸ್ಮಾರಕ ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರ, ಎಂ.ಸಿ ಬಡಾವಣೆ ಡಾ.ಬಾಲಗಂಗಾಧರನಾಥ ಸ್ವಾಮೀಜಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಹತ್ತಿರ ವಿಜಯನಗರ ಬೆಂಗಳೂರು-560040 ಇಲ್ಲಿನ ಗ್ರಂಥಾಲಯದ ಸಭಾಂಗಣದಲ್ಲಿ (ನೆಲಮಹಡಿ) ದಿನಾಂಕ:12.10.2026 ರಿಂದ 14.10.2026ರವರೆಗೆ ಬೆಳಿಗ್ಗೆ 10ರಿಂದ ಸಂಜೆ 5.30ರವರೆಗೆ ಏರ್ಪಡಿಸಲಾಗುವುದು. ಹಾಗೂ ಆಯ್ಕೆಯಾದ ತಾತ್ಕಾಲಿಕ ಪಟ್ಟಿಯನ್ನು ಇಲಾಖೆ ಅಧಿಕೃತ ವೆಬ್‌ಸೈಟ್ ...ನಲ್ಲಿ ಪ್ರಕಟಿಸಲಾಗುವುದು.

ರಾಜ್ಯ ಮಟ್ಟದ ಪುಸ್ತಕ ಸಮಿತಿಯಿಂದ ಆಯ್ಕೆಗಾಗಿ ಸಲ್ಲಿಸಿದ ಲೇಖಕರು-ಪ್ರಕಾಶಕರು, ಪ್ರಕಾಶಕರು ಮತ್ತು ಪುಸ್ತಕ ಮಾರಾಟಗಾರರು ತಮ್ಮ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ:12.10.2026 ರಿಂದ 22.10.2026ರ ಸಂಜೆ 5:30ರ ಒಳಗಾಗಿ ಆಯುಕ್ತರು ಸಾರ್ವಜನಿಕ ಗ್ರಂಥಾಲಯ ಇಲಾಖೆ ವಿಶ್ವೇಶ್ವರಯ್ಯ ಮುಖ್ಯಗೋಪುರ, 4ನೇ ಮಹಡಿ ಡಾ.ಅಂಬೇಡ್ಕರ್ ವೀದಿ, ಬೆಂಗಳೂರು 560001 ಇಲ್ಲಿಗೆ ಲಿಖಿತವಾಗಿ ಮನವಿ ಸಲ್ಲಿಸಬಹುದಾಗಿದೆ. ನಂತರ ಬಂದ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ ಎಂದು ಜಿಲ್ಲಾ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ಸಿದ್ಧಾರ್ಥ ಎ.ಭಾವಿಕಟ್ಟೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರಣ್ಯ ಇಲಾಖೆ ಸಿಬ್ಬಂದಿಯಿಂದ ವ್ಯಕ್ತಿಗೆ ಹಲ್ಲೆ ಆರೋಪ; ಕ್ರಮಕ್ಕೆ ಕುಟುಂಬದ ಆಗ್ರಹ



ಲಿಂಗಸುಗೂರು: ಮಸ್ಕಿ ತಾಲೂಕಿನ ಯರದೊಡ್ಡಿ ಗ್ರಾಮದ ರಸ್ತೆ ಬದಿಯಲ್ಲಿ ಸಸಿ ನೆಡುವ ವಿಚಾರವಾಗಿ ಆಕ್ಷೇಪ ವ್ಯಕ್ತಪಡಿಸಿದ್ದ ನಾಯಕ ಸಮುದಾಯದ ವ್ಯಕ್ತಿಯೊಬ್ಬರನ್ನು ಲಿಂಗಸುಗೂರು ಅರಣ್ಯಾಧಿಕಾರಿಗಳ ಕಚೇರಿಗೆ ಕರೆತಂದು ಹಲ್ಲೆ ಮಾಡಲಾಗಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಹಲ್ಲೆಗೀಡಾದ ರಮೇಶ ತಂದೆ ಹನುಮಂತಪ್ಪ ನಾಯಕ ಅವರು ಲಿಂಗಸುಗೂರು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಯರದೊಡ್ಡಿ ಗ್ರಾಮದ ರಸ್ತೆ ಬದಿಯಲ್ಲಿ ಅರಣ್ಯ ಇಲಾಖೆ ವತಿಯಿಂದ ಸಸಿ ನೆಡುವ ಕಾರ್ಯ ನಡೆಯುತ್ತಿತ್ತು. ಈ ವೇಳೆ ಸರ್ವೆ ನಂ.29ರಲ್ಲಿ ತಾವು ಉಳುಮೆ ಮಾಡುತ್ತಿರುವ ಜಮೀನಿನಲ್ಲಿ ಸಸಿಗಳನ್ನು ನೆಡಬಾರದು ಎಂದು ರಮೇಶ ಆಕ್ಷೇಪ ವ್ಯಕ್ತಪಡಿಸಿದ್ದರು ಎನ್ನಲಾಗಿದೆ. ಇದರ ನಂತರ ಅವರನ್ನು ಲಿಂಗಸುಗೂರಿನ ವಲಯ ಅರಣ್ಯಾಧಿಕಾರಿಗಳ ಕಚೇರಿಗೆ ಕರೆದುಕೊಂಡು ಹೋಗಿ ವಿಚಾರಣೆ ನೆಪದಲ್ಲಿ ಹಲ್ಲೆ ನಡೆಸಲಾಗಿದೆ ಎಂದು ಅವರ ಕುಟುಂಬಸ್ಥರು ಆರೋಪಿಸಿದ್ದಾರೆ.

ಕುಟುಂಬದವರ ಹೇಳಿಕೆಯ ಪ್ರಕಾರ, ಬುಧವಾರ ರಾತ್ರಿ ಅರಣ್ಯ ಇಲಾಖೆ ಸಿಬ್ಬಂದಿಗಳಾದ ಯಮನೂರು, ಸುರೇಶ ಸೇರಿದಂತೆ ಕೆಲವರು ರಮೇಶ ಅವರಿಗೆ ಬಡಿಗೆಗಳಿಂದ ಹಲ್ಲೆ ನಡೆಸಿದ್ದಾರೆ. ರಾತ್ರಿ ತಡವರೆಗೆ ಕಚೇರಿಯಲ್ಲೇ ಇರಿಸಿಕೊಂಡು ಬೆನ್ನು, ತೊಡೆ ಹಾಗೂ ಕಾಲು ಭಾಗಗಳಿಗೆ ಹೊಡೆದಿದ್ದಾರೆ ಎಂಬ ಆರೋಪವಿದೆ. ತೀವ್ರ ನೋವಿನಿಂದ ರಮೇಶ ಅಸ್ವಸ್ಥಗೊಂಡ ಬಳಿಕ ಕುಟುಂಬಸ್ಥರಿಗೆ ಕರೆ ಮಾಡಿ ಅವರನ್ನು ಕಳುಹಿಸಲಾಗಿದೆ ಎಂದು ಸಂಬಂಧಿಕರು ತಿಳಿಸಿದ್ದಾರೆ.

ಗುರುವಾರ ನೋವು ಹೆಚ್ಚಾದ ಹಿನ್ನೆಲೆಯಲ್ಲಿ ಕುಟುಂಬಸ್ಥರು ರಮೇಶ ಅವರನ್ನು ಲಿಂಗಸುಗೂರು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಪಡೆಯುತ್ತಿರುವ ವೇಳೆ ಘಟನೆ ಬೆಳಕಿಗೆ ಬಂದಿದೆ ಎನ್ನಲಾಗಿದೆ.

ರಮೇಶ ಅವರು ಪತ್ರಿಕೆಗೆ ನೀಡಿದ ಹೇಳಿಕೆಯಲ್ಲಿ, ತಮ್ಮನ್ನು ಅರೆಬೆತ್ತಲೆಗೊಳಿಸಿ ಹಲ್ಲೆ ನಡೆಸಲಾಗಿದೆ ಎಂದು ಆರೋಪಿಸಿದ್ದಾರೆ. ದೇಹದ ಹಲವು ಭಾಗಗಳಲ್ಲಿ ಗಾಯಗಳಾಗಿದ್ದು, ಒಳ ಏಟುಗಳೂ ಉಂಟಾಗಿವೆ ಎಂದು ತಿಳಿಸಿದ್ದಾರೆ.

ಘಟನೆಯಿಂದ ಕುಟುಂಬಸ್ಥರು ಭಯಭೀತರಾಗಿದ್ದು, ಆರಂಭದಲ್ಲಿ ದೂರು ನೀಡಲು ಹಿಂಜರಿದಿದ್ದರು. ಬಳಿಕ ಸಂಬಂಧಿಕರ ಧೈರ್ಯದಿಂದ ಘಟನೆ ಕುರಿತು ಮಾಹಿತಿ ಬಹಿರಂಗಪಡಿಸಿದ್ದು, ಲಿಂಗಸುಗೂರು ಪೊಲೀಸ್ ಠಾಣೆಗೆ ಆಸ್ಪತ್ರೆಯಿಂದ ಎಂಎಲ್‌ಸಿ ಮಾಹಿತಿ ರವಾನಿಸಲಾಗಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಹಲ್ಲೆಗೀಡಾದ ರಮೇಶ ಅವರ ಸಹೋದರ ಶರಣಬಸವ ನಾಯಕ ಮಾತನಾಡಿ, ಅರಣ್ಯ ಇಲಾಖೆ ಅಧಿಕಾರಿಗಳು ₹15 ಸಾವಿರ ಹಣ ನೀಡುವಂತೆ ಕೇಳಿದ್ದರು ಎಂದು ಆರೋಪಿಸಿದರು. ಹಣ ನೀಡಲು ಸಾಧ್ಯವಾಗದ ಹಿನ್ನೆಲೆಯಲ್ಲಿ ರಮೇಶ ಅವರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ದೂರಿದ ಅವರು, ಪ್ರಕರಣದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಗಾಯಗೊಂಡ ರಮೇಶ ಅವರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಘಟನೆ ಕುರಿತು ಅರಣ್ಯ ಇಲಾಖೆ ಅಧಿಕಾರಿಗಳ ಸ್ಪಷ್ಟನೆ ಲಭ್ಯವಾಗಿಲ್ಲ. ಆರೋಪಗಳ ಸತ್ಯಾಸತ್ಯತೆ ಪೊಲೀಸ್ ತನಿಖೆಯಿಂದ ಹೊರಬರಬೇಕಿದೆ.

# ಎಸ್‌ಐಆರ್ ರದ್ದತಿಗೆ ಆಗ್ರಹಿಸಿ ಡಿವೈಎಫ್‌ಐಎಸ್ ಎಫ್‌ಐ ಪ್ರತಿಭಟನೆ




ದೇವದುರ್ಗ: ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಿಂದ ಅರ್ಹ ಮತದಾರರು ಮತದಾನದ ಹಕ್ಕು ಕಳೆದುಕೊಳ್ಳುವ ಆತಂಕವಿದೆ ಎಂದು ಆರೋಪಿಸಿ, ಅದನ್ನು ರದ್ದುಗೊಳಿಸಬೇಕು ಹಾಗೂ ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ಅವರನ್ನು ವಜಾಗೊಳಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಡಿವೈಎಫ್‌ಐ ಮತ್ತು ಎಸ್‌ಎಫ್‌ಐ ಕಾರ್ಯಕರ್ತರು ಅಂಬೇಡ್ಕರ್ ವೃತ್ತದ ಬಳಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಕಟ್ಟಡ ಕಾರ್ಮಿಕ ಶಬ್ಬೀರ್, ಕೇಂದ್ರ ಸರ್ಕಾರವು ವಿವಿಧ ಸರ್ಕಾರಿ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಆರೋಪಿಸಿದರು. ಎಸ್‌ಐಆರ್ ಪ್ರಕ್ರಿಯೆಯಿಂದ ಅರ್ಹ ಮತದಾರರ ಹೆಸರುಗಳು ಪಟ್ಟಿಯಿಂದ ಹೊರಗುಳಿಯುವ ಆತಂಕವಿದ್ದು, ಮತದಾನದ ಹಕ್ಕಿನ ರಕ್ಷಣೆಗೆ ವಿದ್ಯಾರ್ಥಿ ಮತ್ತು ಯುವಜನರು ಹೋರಾಟ ಮುಂದುವರಿಸಲಿದ್ದಾರೆ ಎಂದು ಹೇಳಿದರು.

ಬೆಂಗಳೂರಿನಲ್ಲಿ ನಡೆದ ಹೋರಾಟದ ಮುಂದುವರಿದ ಭಾಗವಾಗಿ ವಿವಿಧೆಡೆ ಪ್ರತಿಭಟನೆಗಳು ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ದೆಹಲಿಯ ಜಂತರ್ ಮಂತರ್‌ನಲ್ಲಿ ಯುವಜನರು ಒಗ್ಗೂಡಿ ಪ್ರತಿಭಟನೆ ನಡೆಸಲಿದ್ದಾರೆ ಎಂದು ತಿಳಿಸಿದರು.

ಸಿಐಟಿಯು ಮುಖಂಡ ಗಿರಿಯಪ್ಪ ಪೂಜಾರಿ ಮಾತನಾಡಿ, ಸರ್ಕಾರಿ ಸಂಸ್ಥೆಗಳ ಖಾಸಗೀಕರಣದಿಂದ ಉದ್ಯೋಗಾವಕಾಶಗಳ ಮೇಲೆ ಪರಿಣಾಮ ಬೀರುತ್ತಿದೆ ಹಾಗೂ ದುಬಾರಿ ಖಾಸಗಿ ಶಿಕ್ಷಣಕ್ಕೆ ಆದ್ಯತೆ ನೀಡುವುದರಿಂದ ಸಾಮಾನ್ಯ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ ಎಂದು ಆರೋಪಿಸಿದರು.

ಕೇಂದ್ರ ಸರ್ಕಾರದ ನೀತಿಗಳನ್ನು ಪ್ರಶ್ನಿಸುವವರ ಧ್ವನಿಯನ್ನು ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದ ಅವರು, ಮತದಾನದ ಹಕ್ಕಿಗೆ ಧಕ್ಕೆಯಾಗುವ ಯಾವುದೇ ಕ್ರಮವನ್ನು ಜನರು ಒಪ್ಪುವುದಿಲ್ಲ. ಯುವಜನರ ಹಕ್ಕುಗಳು ಹಾಗೂ ಪ್ರಜಾಪ್ರಭುತ್ವದ ರಕ್ಷಣೆಗೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ವಿದ್ಯಾರ್ಥಿ ಮುಖಂಡ ಮಹಾಲಿಂಗ ದೊಡ್ಡಮನಿ ಮಾತನಾಡಿ, ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆ ಪಾರದರ್ಶಕವಾಗಿರಬೇಕು ಹಾಗೂ ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಡಿವೈಎಫ್‌ಐ ಜಿಲ್ಲಾಧ್ಯಕ್ಷ ರಾಜು ನಾಯಕ, ಕಾರ್ಯದರ್ಶಿ ರಿಯಾಝ್ ಆರ್ಶಿ, ವೆಂಕಟೇಶ್ ತ್ಯಾಪ್ಲಿ, ಮಲ್ಲು ಗೌಡ್ರ, ಎಸ್‌ಎಫ್‌ಐ ತಾಲೂಕು ಅಧ್ಯಕ್ಷ ಸಂತೋಷ್ ತ್ಯಾಪ್ಲಿ, ಉಪಾಧ್ಯಕ್ಷ ಬಾಬು ಶಾಣೆರದೊಡ್ಡಿ, ವಿನಯ್ ಕುಮಾರ, ದಿಲ್ ಶಾ, ಕೊಂಡಯ್ಯ ಗೋಸಾಲ್, ನಿಂಗಣ್ಣ, ಮಕ್ಸುದ್, ಆರಿಫ್, ಶಿವರಾಜ ಪೂಜಾರ ದೊಡ್ಡಿ, ರಂಗನಾಥ, ಶಿವರಾಜ, ಮಂಜುನಾಥ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಅಂತರ ಮಹಾವಿದ್ಯಾಲಯ ಟೇಬಲ್ ಟೆನ್ನಿಸ್ ಪಂದ್ಯಾವಳಿ



ರಾಯಚೂರು: ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಹಾಗೂ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಇವರ ಸಹಯೋಗದಲ್ಲಿ 2026-27ನೇ ಸಾಲಿನ ಅಂತರ ಮಹಾವಿದ್ಯಾಲಯಗಳ ಟೇಬಲ್ ಟೆನ್ನಿಸ್ ಪಂದ್ಯಾವಳಿ ಹಾಗೂ ವಿಶ್ವವಿದ್ಯಾಲಯದ ತಂಡದ ಆಯ್ಕೆ ಪ್ರಕ್ರಿಯೆ ಅ.8ರಂದು ನಡೆಯಿತು.

ಕಾರ್ಯಕ್ರಮವನ್ನು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಸಚಿವರು (ಮೌಲ್ಯಮಾಪನ) ಪ್ರೊ. ಡಿ.ಎಂ. ಜ್ಯೋತಿ ಅವರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಕ್ರೀಡೆಗಳು ವಿದ್ಯಾರ್ಥಿಗಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಅತ್ಯಂತ ಅಗತ್ಯವಾಗಿವೆ. ಅಂತರ ಕಾಲೇಜು ಮಟ್ಟದ ಕ್ರೀಡಾಕೂಟಗಳು ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಗುರುತಿಸಲು ಉತ್ತಮ ವೇದಿಕೆಯಾಗಿವೆ. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡೆಗೂ ಸಮಾನ ಮಹತ್ವ ನೀಡಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಯಾಗಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಉಪಕುಲಸಚಿವ ಡಾ. ಕೆ. ವೆಂಕಟೇಶ ಮಾತನಾಡಿ, ಕ್ರೀಡೆಗಳು ವಿದ್ಯಾರ್ಥಿಗಳಲ್ಲಿ ಶಿಸ್ತು, ಸಮಯಪಾಲನೆ, ಆತ್ಮವಿಶ್ವಾಸ, ನಾಯಕತ್ವ ಗುಣ ಹಾಗೂ ತಂಡ ಮನೋಭಾವ ಬೆಳೆಸುತ್ತವೆ. ಗೆಲುವು ಮತ್ತು ಸೋಲನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವವನ್ನು ಕ್ರೀಡೆ ಕಲಿಸುತ್ತದೆ ಎಂದರು.

ಮಹಿಳೆಯರು ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡುತ್ತಿದ್ದು, ಅವರಿಗೆ ಇನ್ನಷ್ಟು ಪ್ರೋತ್ಸಾಹ ಹಾಗೂ ಅವಕಾಶಗಳನ್ನು ಒದಗಿಸುವುದು ಅಗತ್ಯವಾಗಿದೆ. ಇಂತಹ ಕ್ರೀಡಾ ವೇದಿಕೆಗಳು ವಿದ್ಯಾರ್ಥಿನಿಯರ ಪ್ರತಿಭೆಯನ್ನು ಹೊರತರುವಲ್ಲಿ ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಸುಗುಣ ಬಸವರಾಜ ಮಾತನಾಡಿ, ಇಂತಹ ವಿಶ್ವವಿದ್ಯಾಲಯ ಮಟ್ಟದ ಕ್ರೀಡಾಕೂಟವನ್ನು ಕಾಲೇಜಿನಲ್ಲಿ ಆಯೋಜಿಸಿರುವುದು ಹೆಮ್ಮೆಯ ಸಂಗತಿ. ವಿವಿಧ ಕಾಲೇಜುಗಳಿಂದ ಆಗಮಿಸಿರುವ ಕ್ರೀಡಾಪಟುಗಳು ಕ್ರೀಡಾಸ್ಫೂರ್ತಿಯಿಂದ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು. ವಿಶ್ವವಿದ್ಯಾಲಯ ತಂಡಕ್ಕೆ ಆಯ್ಕೆಯಾಗುವ ವಿದ್ಯಾರ್ಥಿನಿಯರು ಮುಂದಿನ ಹಂತಗಳಲ್ಲಿಯೂ ಉತ್ತಮ ಸಾಧನೆ ಮಾಡಿ ಕಾಲೇಜು ಹಾಗೂ ವಿಶ್ವವಿದ್ಯಾಲಯಕ್ಕೆ ಕೀರ್ತಿ ತರಬೇಕು ಎಂದು ಶುಭ ಹಾರೈಸಿದರು.

ದೈಹಿಕ ಶಿಕ್ಷಣ ನಿರ್ದೇಶಕ ಡಾ. ಪ್ರಸನ್ನಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಆಯ್ಕೆ ಸಮಿತಿ ಸದಸ್ಯರಾದ ಡಾ. ಜ್ಯೋತಿ ನಾಗೇಂದ್ರಪ್ಪ, ಗಂಗಾಧರ, ಡಾ. ಕಸ್ತೂರಿ ರಜಪುತ ಹಾಗೂ ಸಹ ಪ್ರಾಧ್ಯಾಪಕ ಶರಣಗೌಡ ಕೆ. ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸಹ ಪ್ರಾಧ್ಯಾಪಕರಾದ ಡಾ. ಸೈಯಿದಾ ರಷೀದಾ ಪರವಿನ್, ಡಾ. ಸ್ವರೂಪರಾಣಿ, ಡಾ. ಜ್ಯೋತಿ ಸಿ.ಕೆ., ಸುಮಿತ್ರಾ ಪ್ಯಾಟಿ, ಗ್ರಂಥಪಾಲಕ ಡಾ. ಸುರೇಶ ಎಸ್., ಸಹಾಯಕ ಪ್ರಾಧ್ಯಾಪಕರಾದ ಡಾ. ಸಂತೋಷಕುಮಾರ್ ರೇವೂರ, ಡಾ. ಅಸ್ಮಾ ಸೇರಿದಂತೆ ಅತಿಥಿ ಉಪನ್ಯಾಸಕರು ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಚನ್ನಬಸವ ಕಾರ್ಯಕ್ರಮ ನಿರೂಪಿಸಿದರು. ಪನ್ನಗವೇಣಿ ಪ್ರಾರ್ಥನಾ ಗೀತೆ ಹಾಡಿದರು. ಡಾ. ಉಮಾದೇವಿ ಅತಿಥಿಗಳನ್ನು ಸ್ವಾಗತಿಸಿದರು. ರಂಗನಾಥ ಬಿಲ್ಲಾರ್ ವಂದಿಸಿದರು. ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ವಿದ್ಯಾರ್ಥಿನಿಯರು ಉತ್ಸಾಹದಿಂದ ಸ್ಪರ್ಧೆಗಳಲ್ಲಿ ಪಾಲ್ಗೊಂಡರು.

# ವಿದ್ಯುತ್ ಪೂರೈಕೆಗೆ ಆಗ್ರಹಿಸಿ ಗುರುಗುಂಟಾ ಕೆಬಿ ಮುಂದೆ ರೈತರ ಧರಣಿ; ಅಧಿಕಾರಿಗಳ ಭರವಸೆಗೆ ಹಿಂಪಡೆದ ಪ್ರತಿಭಟನೆ



ಹಟ್ಟಿ ಚಿನ್ನದ ಗಣಿ: ಸಮೀಪದ ಗುರುಗುಂಟಾ ಹೋಬಳಿಯ ಕೆಬಿ ಸೆಕ್ಷನ್ ಕಚೇರಿ ಮುಂದೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಘಟಕದ ನೇತೃತ್ವದಲ್ಲಿ ರೈತರು ರಾತ್ರಿ ಸಮಯದಲ್ಲಿ ದೊಡ್ಡಿಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವಂತೆ ಆಗ್ರಹಿಸಿ ಸುಮಾರು ನಾಲ್ಕು ಗಂಟೆಗಳ ಕಾಲ ಧರಣಿ ನಡೆಸಿದರು.

ಗುರುಗುಂಟಾ ವ್ಯಾಪ್ತಿಯ ರೈತರಿಗೆ ರಾತ್ರಿ ವೇಳೆ ಸಮರ್ಪಕ ವಿದ್ಯುತ್ ಸಿಗದಿರುವುದರಿಂದ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಎಲ್ಲಾ ದೊಡ್ಡಿಗಳಿಗೆ ವಿದ್ಯುತ್ ವ್ಯವಸ್ಥೆ ಕಲ್ಪಿಸಬೇಕು ಹಾಗೂ ರೈತರ ಸಮಸ್ಯೆಗೆ ಶಾಶ್ವತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಧರಣಿಯ ವಿಷಯ ತಿಳಿದು ತಾಲೂಕು ಅಧಿಕಾರಿಗಳಾದ ಎಡಬ್ಲ್ಯೂ ಹಾಗೂ ಸಿಪಿಐ ಹೊಸಕೆರಪ್ಪ ಸ್ಥಳಕ್ಕೆ ಭೇಟಿ ನೀಡಿ ರೈತ ಮುಖಂಡರೊಂದಿಗೆ ಚರ್ಚೆ ನಡೆಸಿದರು. ಎರಡು-ಮೂರು ದಿನಗಳ ಕಾಲಾವಕಾಶ ನೀಡಿದರೆ ಗುರುಗುಂಟಾ ವ್ಯಾಪ್ತಿಯ ರೈತರಿಗೆ ವಿದ್ಯುತ್ ಪೂರೈಕೆ ವ್ಯವಸ್ಥೆಯನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಅಧಿಕಾರಿಗಳ ಭರವಸೆಯ ಹಿನ್ನೆಲೆಯಲ್ಲಿ ರೈತ ಮುಖಂಡರು ತಾತ್ಕಾಲಿಕವಾಗಿ ಧರಣಿಯನ್ನು ಹಿಂಪಡೆದರು.

ಈ ಸಂದರ್ಭದಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಪ್ರಸಾದ್ ರೆಡ್ಡಿ, ಗ್ರಾಮ ಘಟಕ ಅಧ್ಯಕ್ಷ ದುರ್ಗಪ್ಪ ಗೌಡೂರು, ಲಾಲ್ ಸಾಬ್, ಹುಲಗಪ್ಪ, ದುರ್ಗಪ್ಪ, ಮಮ್ಮದ್ ಸಾಬ್, ರಾಮಣ್ಣ, ರಂಗಪ್ಪ, ನಾಗಪ್ಪ, ಶರಣಪ್ಪ, ವೀರಭದ್ರಪ್ಪ, ಶಿವಕುಮಾರ, ಚಂದ್ರಶೇಖರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಟ್ಟಿ ರೈತರ ಜಮೀನಿನಲ್ಲಿ ಡೈಮಂಡ್ ಡ್ರಿಲಿಂಗ್ ಪರಿಶೀಲಿಸಿದ ಅಮರೇಗೌಡ ಪಾಟೀಲ್ ಬಯ್ಯಾಪುರ



ಹಟ್ಟಿ ಚಿನ್ನದ ಗಣಿ: ಹಟ್ಟಿ ಚಿನ್ನದ ಗಣಿ ಕಂಪನಿಯ ಗಣಿ ಗುತ್ತಿಗೆ ಪ್ರದೇಶದಲ್ಲಿದ್ದರೂ ಭೂಸ್ವಾಧೀನವಾಗದೆ ಉಳಿದಿರುವ ರೈತರ ಪಟ್ಟಾ ಜಮೀನುಗಳ ಸಮಸ್ಯೆ ಇತ್ಯರ್ಥಪಡಿಸುವ ನಿಟ್ಟಿನಲ್ಲಿ ಕೈಗೊಳ್ಳಲಾಗುತ್ತಿರುವ ಡೈಮಂಡ್ ಡ್ರಿಲಿಂಗ್ ಕಾರ್ಯವನ್ನು ಮಾಜಿ ಸಚಿವ ಅಮರೇಗೌಡ ಪಾಟೀಲ್ ಬಯ್ಯಾಪುರ ವೀಕ್ಷಿಸಿದರು.

ಹಟ್ಟಿ ಚಿನ್ನದ ಗಣಿ ಕಂಪನಿಯ ಸುಮಾರು 1,305 ಎಕರೆ ಗಣಿ ಗುತ್ತಿಗೆ ಪ್ರದೇಶದಲ್ಲಿ ಭೂಸ್ವಾಧೀನವಾಗದೆ ಉಳಿದಿರುವ ಸುಮಾರು 390 ಎಕರೆ ರೈತರ ಪಟ್ಟಾ ಜಮೀನುಗಳ ಇ.ಸಿ. ದಾಖಲೆಗಳಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿಯ ಹೆಸರು ದಾಖಲಾಗಿರುವುದರಿಂದ ರೈತರು ಹಲವು ವರ್ಷಗಳಿಂದ ತೊಂದರೆ ಅನುಭವಿಸುತ್ತಿದ್ದಾರೆ ಎಂದು ರೈತ ಮುಖಂಡರು ತಿಳಿಸಿದ್ದಾರೆ. ಇದರಿಂದ ಜಮೀನು ಮಾರಾಟ, ಸಾಲ ಸೌಲಭ್ಯ ಸೇರಿದಂತೆ ವಿವಿಧ ಕಾನೂನು ಮತ್ತು ಆರ್ಥಿಕ ವ್ಯವಹಾರಗಳಿಗೆ ಅಡಚಣೆ ಉಂಟಾಗುತ್ತಿದೆ ಎನ್ನಲಾಗಿದೆ.

ಈ ಭೂ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಒತ್ತಾಯಿಸಿ ಭೂ ಹಕ್ಕು ವಂಚಿತ ರೈತ ಹೋರಾಟ ಸಮಿತಿ ವತಿಯಿಂದ ಕಳೆದ ಆಗಸ್ಟ್ ತಿಂಗಳಲ್ಲಿ ಸರದಿ ಉಪವಾಸ ಸತ್ಯಾಗ್ರಹ ನಡೆಸಲಾಗಿತ್ತು. ಈ ವೇಳೆ ಹಟ್ಟಿ ಚಿನ್ನದ ಗಣಿ ಕಂಪನಿಯ ಅಧಿಕಾರಿಗಳು ಭೂ ಅನ್ವೇಷಣೆ ನಡೆಸಿದ ಬಳಿಕ ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ ಭರವಸೆ ನೀಡಿದ್ದರು. ಅಧಿಕಾರಿಗಳ ಭರವಸೆ ಹಿನ್ನೆಲೆಯಲ್ಲಿ ರೈತರು ತಮ್ಮ ಹೋರಾಟವನ್ನು ಹಿಂಪಡೆದಿದ್ದರು.

ಇದೀಗ ರೈತರ ಜಮೀನುಗಳಲ್ಲಿ ಡೈಮಂಡ್ ಡ್ರಿಲಿಂಗ್ ಕಾರ್ಯ ಆರಂಭವಾಗಿದ್ದು, ಮಹೇಶ್ವರಿ ಡ್ರಿಲಿಂಗ್ ಕಂಪನಿಯು ಕಾಮಗಾರಿ ಕೈಗೊಂಡಿದೆ. ಚಿನ್ನದ ಅದಿರು ಅನ್ವೇಷಣೆಗಾಗಿ ಒಟ್ಟು ಆರು ಸ್ಥಳಗಳನ್ನು ಗುರುತಿಸಲಾಗಿದ್ದು, ಪ್ರಸ್ತುತ ಎರಡು ಸ್ಥಳಗಳಲ್ಲಿ ಡ್ರಿಲಿಂಗ್ ನಡೆಯುತ್ತಿದೆ. ಪ್ರತಿ ಸ್ಥಳದಲ್ಲಿ ಸುಮಾರು 550 ಮೀಟರ್ ಆಳದವರೆಗೆ ಡ್ರಿಲಿಂಗ್ ನಡೆಸಿ, ಹೊರಬರುವ ಕೋರ್ ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸಲಾಗುವುದು ಎಂದು ಹಟ್ಟಿ ಚಿನ್ನದ ಗಣಿ ಕಂಪನಿಯ ಭೂ ಅನ್ವೇಷಣಾಧಿಕಾರಿ ಸೋಲಂಕಿ ಮಾಹಿತಿ ನೀಡಿದರು.

ಡ್ರಿಲಿಂಗ್ ಕಾರ್ಯ ಪರಿಶೀಲಿಸಿದ ಮಾಜಿ ಸಚಿವ ಅಮರೇಗೌಡ ಪಾಟೀಲ್ ಬಯ್ಯಾಪುರ ಮಾತನಾಡಿ, ರೈತರು ನಿರಂತರವಾಗಿ ನಡೆಸಿದ ಹೋರಾಟದ ಫಲವಾಗಿ ಕಂಪನಿ ಭೂ ಅನ್ವೇಷಣಾ ಕಾರ್ಯ ಕೈಗೊಂಡಿದೆ. ಈ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಿ ರೈತರ ಜಮೀನುಗಳಿಗೆ ಸಂಬಂಧಿಸಿದ ಸಮಸ್ಯೆಗೆ ಶಾಶ್ವತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಭೂ ಅನ್ವೇಷಣೆ ಪೂರ್ಣಗೊಂಡ ನಂತರವೂ ರೈತರಿಗೆ ನ್ಯಾಯ ದೊರೆಯದಿದ್ದರೆ ಮತ್ತೆ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಸಿದರು.

ಡೈಮಂಡ್ ಡ್ರಿಲಿಂಗ್ ಹಾಗೂ ಭೂ ಅನ್ವೇಷಣೆ ಪ್ರಕ್ರಿಯೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಹಲವು ವರ್ಷಗಳಿಂದ ಬಾಕಿ ಉಳಿದಿರುವ ಭೂ ಸಮಸ್ಯೆಗೆ ಪರಿಹಾರ ದೊರೆಯಬಹುದು ಎಂಬ ನಿರೀಕ್ಷೆ ರೈತರಲ್ಲಿ ಮೂಡಿದೆ.

ಈ ಸಂದರ್ಭದಲ್ಲಿ ಭೂ ಹಕ್ಕು ಹೋರಾಟ ಸಮಿತಿಯ ಪದಾಧಿಕಾರಿಗಳಾದ ಶಂಕರಗೌಡ ಬಳಗನೂರು, ಶಿವಪುತ್ರಪ್ಪ, ಶಿವಾನಂದ, ಬಾಬು ನಾಯಿಕೋಡಿ, ಸುರೇಶಗೌಡ ಗುರಿಕಾರ, ಬಾಲದಂಡಪ್ಪ ಗುರಿಕಾರ, ಅಮರೇಶ ಕುರ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಫಲಿತಾಂಶ ವಿಳಂಬ ಖಂಡಿಸಿ ಎಬಿವಿಪಿ ನೇತೃತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ



ಸಿಂಧನೂರು: ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಹಾಗೂ ಸರ್ಕಾರಿ ಮಾದರಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ಎದುರಾಗುತ್ತಿರುವ ವಿವಿಧ ಶೈಕ್ಷಣಿಕ ಸಮಸ್ಯೆಗಳನ್ನು ಪರಿಹರಿಸುವಂತೆ ಆಗ್ರಹಿಸಿ ಅಖಿಲ ಭಾರತ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ನೇತೃತ್ವದಲ್ಲಿ ವಿದ್ಯಾರ್ಥಿಗಳು ಶುಕ್ರವಾರ ಪ್ರತಿಭಟನೆ ನಡೆಸಿ, ತಹಶೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ವಿಶ್ವವಿದ್ಯಾಲಯದ ಪರೀಕ್ಷಾ ಫಲಿತಾಂಶ ಹಾಗೂ ಅಂಕಪಟ್ಟಿ ಪ್ರಕಟಣೆಯಲ್ಲಿ ವಿಳಂಬವಾಗುತ್ತಿದೆ. ಫೆಬ್ರುವರಿ ತಿಂಗಳಲ್ಲೇ ಮೌಲ್ಯಮಾಪನ ಪ್ರಕ್ರಿಯೆ ಪೂರ್ಣಗೊಂಡಿದ್ದರೂ ಇದುವರೆಗೆ ಅಂಕಪಟ್ಟಿಗಳು ಲಭ್ಯವಾಗಿಲ್ಲ ಎಂದು ವಿದ್ಯಾರ್ಥಿಗಳು ದೂರಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ದಾಖಲೆಗಳನ್ನು ಎನ್‌ಎಡಿ ಹಾಗೂ ಡಿಜಿಲಾಕರ್‌ಗೆ ಅಪ್‌ಲೋಡ್ ಮಾಡದಿರುವುದರಿಂದ ಮುಂದಿನ ಪದವಿ ಪ್ರವೇಶ, ವಿಶೇಷವಾಗಿ ಸ್ನಾತಕೋತ್ತರ ಪ್ರವೇಶ ಪ್ರಕ್ರಿಯೆಯಲ್ಲಿ ತೊಂದರೆ ಉಂಟಾಗುವ ಆತಂಕವಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಕಳೆದ ನಾಲ್ಕೈದು ವರ್ಷಗಳಿಂದ ವಿಶ್ವವಿದ್ಯಾಲಯದ ಘಟಿಕೋತ್ಸವ ನಡೆಸದಿರುವುದರಿಂದ ಪದವಿ ಪೂರ್ಣಗೊಳಿಸಿರುವ ವಿದ್ಯಾರ್ಥಿಗಳಿಗೆ ಅಗತ್ಯ ಪ್ರಮಾಣಪತ್ರಗಳು ಸಕಾಲದಲ್ಲಿ ಸಿಗುತ್ತಿಲ್ಲ. ಈ ಸಮಸ್ಯೆಗಳಿಂದ ವಿದ್ಯಾರ್ಥಿಗಳ ಮುಂದಿನ ಶಿಕ್ಷಣ ಹಾಗೂ ಉದ್ಯೋಗಾವಕಾಶಗಳ ಮೇಲೂ ಪರಿಣಾಮ ಬೀರುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಫಲಿತಾಂಶ ಹಾಗೂ ಅಂಕಪಟ್ಟಿಗಳನ್ನು ತಕ್ಷಣ ಪ್ರಕಟಿಸಬೇಕು, ಎನ್‌ಎಡಿ ಮತ್ತು ಡಿಜಿಲಾಕರ್‌ಗೆ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಬೇಕು ಹಾಗೂ ಬಾಕಿ ಇರುವ ಘಟಿಕೋತ್ಸವಗಳನ್ನು ಶೀಘ್ರ ನಡೆಸಬೇಕು ಎಂದು ವಿದ್ಯಾರ್ಥಿಗಳು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ನಗರದ ಆಕ್ಸ್‌ಫರ್ಡ್ ಕಾಲೇಜು, ಎಕ್ಸಲೆಂಟ್ ಕಾಲೇಜು ಹಾಗೂ ಎಲ್‌ಬಿಕೆ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಸಲ್ಲಿಸಿದರು.

# ಅ.11ರಿಂದ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ರಜತ ಮಹೋತ್ಸವ ಹಾಗೂ ನವರಾತ್ರೋತ್ಸವ




ಲಿಂಗಸುಗೂರು: ಪಟ್ಟಣದ ಎಸ್‌ಬಿಐಚ್ ಕಾಲೋನಿಯ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದಲ್ಲಿ ಅ.11ರಿಂದ 20ರವರೆಗೆ ರಜತ ಮಹೋತ್ಸವ ಹಾಗೂ ನವರಾತ್ರೋತ್ಸವವನ್ನು ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ.

ರಜತ ಮಹೋತ್ಸವದ ಅಂಗವಾಗಿ ಅ.12 ಮತ್ತು 13ರಂದು ಉಡುಪಿ ಅದಮಾರು ಮಠದ ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರು ಆಗಮಿಸಲಿದ್ದು, ಬೆಳಿಗ್ಗೆ ಪಾದಪೂಜೆ, ಸಂಸ್ಥಾನ ಪೂಜೆ ಹಾಗೂ ಪ್ರವಚನ ಕಾರ್ಯಕ್ರಮಗಳು ನಡೆಯಲಿವೆ.

ಅ.14ರಂದು ಬೆಂಗಳೂರಿನ ಭಂಡಾರಕೇರಿ ಮಠದ ಶ್ರೀ ವಿದ್ಯೇಶತೀರ್ಥ ಶ್ರೀಪಾದಂಗಳವರು ಆಗಮಿಸಿ ಪಾದಪೂಜೆ, ಸಂಸ್ಥಾನ ಪೂಜೆ ಹಾಗೂ ಆಶೀರ್ವಚನ ನೀಡಲಿದ್ದಾರೆ. ಅ.15 ಮತ್ತು 16ರಂದು ಹುಣಸಿಹೊಳೆ ಕಣ್ವಮಠದ ಶ್ರೀ ವಿದ್ಯಾಕಣ್ವ ವಿರಾಜತೀರ್ಥ ಶ್ರೀಪಾದಂಗಳವರ ಪಾದಪೂಜೆ, ಸಂಸ್ಥಾನ ಪೂಜೆ, ಉಪನ್ಯಾಸ ಹಾಗೂ ಆಶೀರ್ವಚನ ಕಾರ್ಯಕ್ರಮಗಳು ನಡೆಯಲಿವೆ.

ಆಶ್ವೀಜ ಶುಕ್ಲಪಕ್ಷದ ಪ್ರತಿಪದದಿಂದ ಮಹಾನವಮಿವರೆಗೆ ನಡೆಯುವ ನವರಾತ್ರಿ ಮಹೋತ್ಸವದಲ್ಲಿ ಶ್ರೀನಿವಾಸ ದೇವರ ಪೂಜೆಗೆ ವಿಶೇಷ ಆದ್ಯತೆ ನೀಡಲಾಗಿದ್ದು, ಒಂಬತ್ತು ದಿನಗಳ ಕಾಲ ದೀಪ ಸಮರ್ಪಣೆ ಹಾಗೂ ವಿಶೇಷ ಅನ್ನಸಂತರ್ಪಣೆ ನಡೆಯಲಿದೆ.

ಶ್ರೀದೇವಿಭೂದೇವಿ ಸಮೇತ ಶ್ರೀ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿಯ ನವರಾತ್ರಿ ಮಹೋತ್ಸವವು ಅ.11ರಿಂದ ವಿಜಯದಶಮಿಯಾದ ಅ.20ರವರೆಗೆ ನಡೆಯಲಿದೆ.

ಶ್ರೀ ಶ್ರೀನಿವಾಸ ದೇವರ ಮಹಾತ್ಮೆ ಪುರಾಣ ಹಾಗೂ ಶ್ರೀನಿವಾಸ ಕಲ್ಯಾಣೋತ್ಸವ ಕುರಿತು ಪಂ. ಗೋವಿಂದಾಚಾರ್ಯ ಸಿಂಧನೂರು ಅವರು ಪ್ರತಿದಿನ ಮಧ್ಯಾಹ್ನ 12ರಿಂದ 1ರವರೆಗೆ ಪ್ರವಚನ ನೀಡಲಿದ್ದಾರೆ. ಅ.20ರಂದು ಬೆಳಿಗ್ಗೆ 10ಕ್ಕೆ ಪುರಾಣ ಮಂಗಳ ಕಾರ್ಯಕ್ರಮ ನಡೆಯಲಿದೆ.

ಪ್ರತಿದಿನ ಬೆಳಿಗ್ಗೆ 11ರಿಂದ 12ರವರೆಗೆ ಶ್ರೀ ಲಕ್ಷ್ಮೀ ವೆಂಕಟೇಶ ಮಹಿಳಾ ಭಜನಾ ಮಂಡಳಿಯಿಂದ ಭಜನಾ ಕಾರ್ಯಕ್ರಮ ಜರುಗಲಿದೆ.

ಸಕಲ ಸದ್ಭಕ್ತರು ನವರಾತ್ರೋತ್ಸವದ ವಿವಿಧ ಧಾರ್ಮಿಕ ಸೇವೆಗಳಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದು ಪುನೀತರಾಗುವಂತೆ ದೇವಸ್ಥಾನದ ಧರ್ಮದರ್ಶಿ ಪ್ರಾಣೇಶ ಆಚಾರ ವಂದಲಿ ಹಾಗೂ ವಿಶ್ವಸ್ಥ ಸಮಿತಿ ಅಧ್ಯಕ್ಷ ಮೋಹನ ಜೋಶಿ ಮನವಿ ಮಾಡಿದ್ದಾರೆ.

# ಅಂತಿಮವಾಗಿ ಚುನಾವಣಾ ಕಣದಲ್ಲಿ 13 ಅಭ್ಯರ್ಥಿಗಳು

ಕೊಪ್ಪಳ ಅ. 09 (ಕರ್ನಾಟಕ ವಾರ್ತೆ): ಕರ್ನಾಟಕ ವಿಧಾನ ಪರಿಷತ್ತಿಗೆ ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ಒಂದು ಸ್ಥಾನ ಆಯ್ಕೆಯ ಚುನಾವಣೆ ಇದೇ ಅಕ್ಟೋಬರ್ 23 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 4 ಗಂಟೆ ವರೆಗೆ ಮತದಾನ ನಡೆಯಲಿದ್ದು, ಅಂತಿಮವಾಗಿ ಚುನಾವಣಾ ಕಣದಲ್ಲಿ 13 ಅಭ್ಯರ್ಥಿಗಳು ಉಳಿದಿದ್ದಾರೆ ಎಂದು ಕ್ಷೇತ್ರದ ಚುನಾವಣಾಧಿಕಾರಿಯಾಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ತಿಳಿಸಿದ್ದಾರೆ.

ನಾಮಪತ್ರ ಹಿಂಪಡೆಯಲು ಶುಕ್ರವಾರ ಕೊನೆ ದಿನವಾಗಿದ್ದರಿಂದ ಪಕ್ಷೇತರ ಅಭ್ಯರ್ಥಿ ನಬಿರಸೂಲ್ ತಂದೆ ದಸ್ತಗೀರಸಾಬ್ ಜಕಾತಿ ಎಂಬುವರು ನಾಮಪತ್ರ ವಾಪಸ್ ಪಡೆದಿದ್ದಾರೆ. ಬುಧವಾರ ನಡೆದ ನಾಮಪತ್ರ ಪರಿಶೀಲನೆಯಲ್ಲಿ 14 ಅಭ್ಯರ್ಥಿಗಳ ನಾಮೊತ್ರ ಕ್ರಮಬದ್ಧವಾಗಿದ್ದವು. ಇದೀಗ ಓರ್ವ ಅಭ್ಯರ್ಥಿ ನಾಮಪತ್ರ ಚಾಪಸ್ ಪಡೆದಿದ್ದರಿಂದ ಅಂತಿಮ ಚುನಾವಣಾ ಕಣದಲ್ಲಿ 13 ಅಭ್ಯರ್ಥಿಗಳು ಮಾತ್ರ ಉಳಿದುಕೊಂಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶರಣಪ್ಪ ಮಟ್ಟೂರ ತಂದೆ ಹಣಮಂತಪ್ಪ, ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಶಶೀಲ್ ಜಿ. ನಮೋಶಿ ತಂದೆ ಗಂಗಾಧರ ನಮೋಶಿ, ಆಮ್ ಆದ್ಮಿ ಪಕ್ಷದ ಅಭ್ಯರ್ಥಿ ಸಾಯಬಣ್ಣಾ ತಂದೆ ನಾಗೀಂದ್ರ,

ಜನತಾ ದಳ(ಸಂಯುಕ್ತ) ಪಕ್ಷದ ಅಭ್ಯರ್ಥಿ ಶಂಕರೆಡ್ಡಿ ಪಾಟೀಲ ತಂದೆ ಲಿಂಗನಗೌಡ ಪಾಟೀಲ, ಪಕ್ಷೇತರ ಅಭ್ಯರ್ಥಿಗಳಾದ ಕವಿರಾಜ ತಂದೆ ನಾಗಣ್ಣ, ತುಳಸಪ್ಪ ದಾಸರ ತಂದೆ ಕರಿಯಪ್ಪ ದಾಸರ, ಮಹಬೂಬ್ ತಂದೆ ಮೊಹಮ್ಮದ ಖಾಜಾ ಹುಸೇನ್ ವಂಟೇಲಿ, ರಾಜಕುಮಾರ ತಂದೆ ಮಾಣಿಕಪ್ಪ, ರಾಜು ತಂದೆ ದೇವಪ್ಪ, ಶರಣಬಸಪ್ಪ ತಂದೆ ಪೀರಪ್ಪ, ಶಶಿಧರ ತಂದೆ ಬಸವರಾಜ, ಶಿವಶಂಕರ ತಂದೆ ಅಣ್ಣಪ್ಪ ಹಾಗೂ ಡಾ.ಸುರೇಶ ತಂದೆ ದಾವೀದಪ್ಪ ಅಂತಿಮ ಕಣದಲ್ಲಿ ಉಳಿದ ಅಭ್ಯರ್ಥಿಗಳಾಗಿದ್ದಾರೆ.

# ಕೊಪ್ಪಳ ಜಿಲ್ಲಾ ಕೇಂದ್ರ ಗ್ರಂಥಾಲಯ: ಹಳೆಯ ದಿನಪತ್ರಿಕೆ, ನಿಯತಕಾಲಿಕೆಗಳ ದರಪಟ್ಟಿ ರದ್ದು

ಕೊಪ್ಪಳ ಅಕ್ಟೋಬರ್ 09 (ಕರ್ನಾಟಕ ವಾರ್ತೆ): ಕೊಪ್ಪಳ ಜಿಲ್ಲಾ ಕೇಂದ್ರ ಗ್ರಂಥಾಲಯ ವ್ಯಾಪ್ತಿಯ ಗ್ರಂಥಾಲಯಗಳಲ್ಲಿನ ಹಳೆಯ ದಿನಪತ್ರಿಕೆ ಹಾಗೂ ನಿಯತಕಾಲಿಕೆಗಳ ಮಾರಾಟಕ್ಕೆ ಸಂಬಂಧಿಸಿದಂತೆ ಆಹ್ವಾನಿಸಲಾಗಿದ್ದ ದರಪಟ್ಟಿಯನ್ನು ರದ್ದುಪಡಿಸಲಾಗಿದೆ ಎಂದು ಮುಖ್ಯ ಗ್ರಂಥಾಲಯಾಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಅವರು, ಹಳೆಯ ದಿನಪತ್ರಿಕೆ ಮತ್ತು ನಿಯತಕಾಲಿಕೆಗಳ ಮಾರಾಟಕ್ಕೆ ದಿನಾಂಕ 22.09.2026 ರಂದು ದರಪಟ್ಟಿ ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಸಲು ಅಕ್ಟೋಬರ್ 6 ಕೊನೆಯ ದಿನವಾಗಿದ್ದು, ನಿಯಮಾನುಸಾರ ಕನಿಷ್ಠ ಮೂರು ದರಪಟ್ಟಿಗಳು ಸ್ವೀಕೃತವಾಗಬೇಕಿತ್ತು. ಆದರೆ, ಕೇವಲ ಇಬ್ಬರು ದರಪಟ್ಟಿದಾರರಿಂದ ಮಾತ್ರ ಅರ್ಜಿಗಳು ಬಂದ ಹಿನ್ನೆಲೆಯಲ್ಲಿ ಈ ದರಪಟ್ಟಿಯನ್ನು ರದ್ದುಗೊಳಿಸಲಾಗಿದೆ.

ಬೆಂಗಳೂರಿನ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಆಯುಕ್ತರ ನಡವಳಿಗಳನ್ವಯ, ಇಲಾಖೆ ನಿಗದಿಪಡಿಸಿದ ದರದಂತೆ ಕರ್ನಾಟಕ ವ್ಯವಸಾಯ ಹಾಗೂ ಇತರೆ ಉಪಕರಣಗಳ ಸಣ್ಣ ಕೈಗಾರಿಕಾ ಸಂಸ್ಥೆ (ರಿ) ಇವರಿಗೆ ಕಛೇರಿ ವ್ಯಾಪ್ತಿಯ ಅನುಪಯುಕ್ತ ವಸ್ತುಗಳನ್ನು ವಿಲೇವಾರಿ ಮಾಡಲಾಗುವುದು ಎಂದು ಪ್ರಕಟಣೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K